# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಆರೋಗ್ಯವು ಇತರರೊಂದಿಗೆ ಸಂತೋಷವನ್ನು ಹಂಚಿಕೊಳ್ಳುವ ಮೂಲಕ ಅರಳುತ್ತದೆ. ಪ್ರಮುಖ ಜನರು ವಿಶೇಷ ವರ್ಗ ಹೊಂದಿರುವ ಯಾವುದಕ್ಕಾದರೂ ಹಣಕಾಸು ನೀಡಲು ಸಿದ್ಧವಾಗಿರುತ್ತಾರೆ. ಯುವಕರನ್ನು ಹೊಂದಿರುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಒಳ್ಳೆಯ ಸಮಯ. ಸಂತೋಷಕ್ಕಾಗಿ ಹೊಸ ಸಂಬಂಧವನ್ನು ಎದುರುನೋಡಬಹುದು ಈ ರಾಶಿಚಕ್ರದ ಜನರು ಇಂದು ನಿಮ್ಮ ಬಿಡುವಿನ ವೇಳೆಯಲ್ಲಿ ಆಧ್ಯಾತ್ಮಿಕ ಪುಸ್ತಕಗಳ ಅಧ್ಯಯನ ಮಾಡಬೇಕು.

### ವೃಷಭ ರಾಶಿ

ಸಾಧ್ಯವಾದರೆ ದೀರ್ಘ ಪ್ರಯಾಣವನ್ನು ತಪ್ಪಿಸಿ. ಏಕೆಂದರೆ ನೀವು ಪ್ರಯಾಣಿಸು ತುಂಬಾ ದುರ್ಬಲರಾಗಿದ್ದೀರಿ ಹಾಗೂ ಇದು ಮತ್ತಷ್ಟು ನಿಮ್ಮನ್ನು ದುರ್ಬಲಗೊಳಿಸುತ್ತದೆ. ಇಂದು ನೀವು ನಿಮ್ಮ ಮನೆಯ ಹಿರಿಯ ಜನರಿಂದ ಹಣವನ್ನು ಉಳಿಸುವ ಬಗ್ಗೆ ಯಾವುದೇ ಸಲಹೆಯನ್ನು ತೆಗೆದುಕೊಳ್ಳಬಹುದು ಮತ್ತು ಆ ಸಲಹೆಗೆ ಜೀವನದಲ್ಲಿ ಸ್ಥಾನವನ್ನು ಸಹ ನೀಡಬಹುದು ನೀವು ಶಾಂತಿ ಕಾಪಾಡಲು ಹಾಗೂ ಕೌಟುಂಬಿಕ ಸಾಮರಸ್ಯವನ್ನು ಕಾಪಾಡಲು ನಿಮ್ಮ ಕೋಪವನ್ನು ಮೆಟ್ಟಿ ನಿಲ್ಲಬೇಕು.

### ಮಿಥುನ ರಾಶಿ

ಅನಂತ ಚೇತನ್ಯ ಮತ್ತು ಉತ್ಸಾಹ ನಿಮ್ಮನ್ನು ಆವರಿಸುತ್ತದೆ ಮತ್ತು ನೀವು ಯಾವುದೇ ಅವಕಾಶವನ್ನು ನಿಮ್ಮ ಅನುಕೂಲಕ್ಕೆ ಬಳಸಿಕೊಳ್ಳುತ್ತೀರಿ. ಯಾವುದೇ ಹಳೆಯ ಸ್ನೇಹಿತ ಇಂದು ನಿಮ್ಮ ಬಳಿ ಹಣವನ್ನು ಕೇಳಬಹುದು. ನೀವು ಅವರಿಗೆ ಸಹಾಯ ಮಾಡಿದರೆ, ನಿಮ್ಮ ಆರ್ಥಿಕ ಪರಿಸ್ಥಿತಿ ಸ್ವಲ್ಪ ತೊಂದರೆಗೊಳಗಾಗಬಹುದು. ನಿಮ್ಮ ಆಹ್ಲಾದಕರ ವರ್ತನೆ ಕುಟುಂಬ ಜೀವನವನ್ನು ಬೆಳಗುತ್ತದೆ. ಕೆಲವೇ ಜನರು ಇಂಥ ಪ್ರಾಮಾಣಿಕ ನಗುವಿರುವ ವ್ಯಕ್ತಿಯನ್ನು ನಿರ್ಲಕ್ಷಿಸಬಲ್ಲರು.

### ಕರ್ಕ ರಾಶಿ

ಮಾತನಾಡುವ ಮುನ್ನ ಯೋಚಿಸಿ. ತಿಳಿಯದೆ ನಿಮ್ಮ ಅಭಿಪ್ರಾಯಗಳು ಬೇರೊಬ್ಬರ ಭಾವನೆಗಳಿಗೆ ಧಕ್ಕೆಯುಂಟು ಮಾಡಬಹುದು. ಹಣದ ಚಲನೆ ದಿನವಿಡೀ ಮುಂದುವರಿಯುತ್ತದೆ ಮತ್ತು ದಿನದ ಅಂತ್ಯದ ನಂತರ ನೀವು ಉಳಿಸಲು ಸಾಧ್ಯವಾಗುತ್ತದೆ. ನೀವು ಶಾಂತಿ ಕಾಪಾಡಲು ಹಾಗೂ ಕೌಟುಂಬಿಕ ಸಾಮರಸ್ಯವನ್ನು ಕಾಪಾಡಲು ನಿಮ್ಮ ಕೋಪವನ್ನು ಮೆಟ್ಟಿ ನಿಲ್ಲಬೇಕು ನಿಮ್ಮ ಸಂಗಾತಿ ನಿಮ್ಮ ಸ್ಥಾನವನ್ನು ತಿಳಿದುಕೊಳ್ಳುವಂತೆ ಮಾಡಲು ನೀವು ತೊಂದರೆ ಹೊಂದಿರುತ್ತೀರಿ.

### ಸಿಂಹ ರಾಶಿ

ನಿಮ್ಮ ಆರೋಗ್ಯದ ಬಗ್ಗೆ ಚಿಂತಿಸಲು ನಿರಾಕರಿಸಿ. ಇದು ಅನಾರೋಗ್ಯದ ವಿರುದ್ಧ ಪ್ರಬಲ ಚುಚ್ಚುಮದ್ದು. ನಿಮ್ಮ ಸರಿಯಾದ ಮನೋಭಾವ ತಪ್ಪು ಮನೋಭಾವವನ್ನು ಸೋಲಿಸುತ್ತದೆ. ಮನೆಯಲ್ಲಿ ಯಾವುದೇ ಕಾರ್ಯಕ್ರಮ ನಡೆಯುವ ಕಾರಣದಿಂದಾಗಿ ಇಂದು ನೀವು ನಿಮ್ಮ ಸಾಕಷ್ಟು ಹಣವನ್ನು ಖರ್ಚು ಮಾಡಬೇಕಾಗುತ್ತದೆ, ಕಾರಣದಿಂದಾಗಿ ನಿಮ್ಮ ಆರ್ಥಿಕ ಪರಿಸ್ಥಿತಿ ಹದಗೆಡಬಹುದು. ನಿಮ್ಮ ಅತಿಥಿಗಳ ಜೊತ ಒರಟಾಗಿ ನಡೆದುಕೊಳ್ಳಬೇಡಿ.

### ಕನ್ಯಾ ರಾಶಿ

ಇಂದು ನಿಮ್ಮ ವ್ಯಕ್ತಿತ್ವ ಒಂದು ಸುಗಂಧದಂತೆ ಕೆಲಸ ಮಾಡುತ್ತದೆ. ಹಣಕಾಸು ಲಾಭಗಳು ವಿವಿಧ ಮೂಲಗಳಿಂದ ಬರುತ್ತದೆ. ನಿಮ್ಮ ಮಕ್ಕಳಿಗಾಗಿ ಯೋಜನೆಗಳು ಮಾಡಲು ಅತ್ಯುತ್ತಮ ದಿನ. ಸ್ವಲ್ಪ ಸಂಘರ್ಷದ ಹೊರತಾಗಿಯೂ, ನಿಮ್ಮ ಪ್ರೀತಿಯ ಜೀವನವು ಇಂದು ಉತ್ತಮವಾಗಿರುತ್ತದೆ ಮತ್ತು ನೀವು ನಿಮ್ಮ ಸಂಗಾತಿಯನ್ನು ಸಂತೋಷವಾಗಿಡಲು ಯಶಸ್ವಿಯಾಗುತ್ತೀರಿ ಉಚಿತ ಸಮಯದಲ್ಲಿ ಇಂದು ಯಾವುದೇ ಆಟವನ್ನು ಆಡಬಹುದು.

### ತುಲಾ ರಾಶಿ

ಮದ್ಯಪಾನ ಮಾಡಿದಲ್ಲಿ ಅದು ನಿಮ್ಮ ನಿದ್ರೆಗೆ ಭಂಗ ತಂದು ಆಳವಾದ ವಿಶ್ರಾಂತಿ ತೆಗೆದುಕೊಳ್ಳುವುದನ್ನು ತಡೆಗಟ್ಟಬಹುದಾದ್ದರಿಂದ ಹಾಗೆ ಮಾಡಬೇಡಿ. ನೀವು ನಿಮ್ಮ ಕೋಪವನ್ನು ನಿಯಂತ್ರಿಸಿ ಮತ್ತು ಕಚೇರಿಯಲ್ಲಿ ಎಲ್ಲರೊಂದಿಗೆ ಉತ್ತಮವಾಗಿ ವರ್ತಿಸಿ., ಆಗೇ ನೀವು ಮಾಡದಿದ್ದರೆ ನಿಮ್ಮ ಕೆಲಸ ಹೋಗಬಹುದು.

### ವೃಶ್ಚಿಕ ರಾಶಿ

ಸ್ವಲ್ಪ ವ್ಯಾಯಾಮದೊಂದಿಗೆ ನಿಮ್ಮ ದಿನವನ್ನು ಪ್ರಾರಂಭಿಸಿ ನಿಮ್ಮ ಬಗ್ಗೆ ನೀವೇ ಒಳ್ಳೆಯ ಅಭಿಪ್ರಾಯ ಇಟ್ಟುಕೊಳ್ಳುವುದು ಮುಖ್ಯ ಇದನ್ನು ದಿನವೂ ಮಾಡುವುದನ್ನು ರೂಢಿ ಮಾಡಿಕೊಳ್ಳಿ ಹಾಗೂ ಅದನ್ನು ಕಟ್ಟುನಿಟ್ಟಾಗಿ ಅನುಸರಿಸಿ. ನಿಮ್ಮ ಅವಾಸ್ತವಿಕ ಯೋಜನೆ ಹಣದ ಕೊರತೆಗೆ ಕಾರಣವಾಗುತ್ತದೆ. ನಿಮ್ಮ ನಾಲಗೆ ನಿಮ್ಮ ಅಜ್ಜ ಅಜ್ಜಿಯಂದಿರ ಭಾವನೆಗಳಿಗೆ ಘಾಸಿ ಮಾಡುವುದರಿಂದ ನಿಮ್ಮ ಭಾಷೆಯನ್ನು ನಿಯಂತ್ರಿಸಿ.

### ಧನು ರಾಶಿ

ನಿಮ್ಮ ಭರವಸೆ ಒಂದು ಸಮೃದ್ಧ, ಸೂಕ್ಷ್ಮ ಪರಿಮಳಯುಕ್ತ ಮತ್ತು ಬೆರಗುಗೊಳಿಸುವ ಹೂವಿನ ಹಾಗೆ ಅರಳುತ್ತದೆ. ಪೂರ್ತಿ ದಿನ ನೀವು ಹಣದ ಬಗ್ಗೆ ಹೋರಾಟ ಮಾಡುತ್ತಿದ್ದೀರಿ, ಆದರೆ ಸಂಜೆಯ ಸಮಯದಲ್ಲಿ ನೀವು ಹಣದ ಲಾಭವನ್ನು ಪಡೆಯಬಹುದು. ಸಂಜೆ ನಿಮ್ಮ ಮಕ್ಕಳೊಂದಿಗೆ ಸ್ವಲ್ಪ ಆಹ್ಲಾದಕರ ಸಮಯ ಕಳೆಯಿರಿ. ನಿಮ್ಮ ಮಾತುಗಳನ್ನು ಸರಿಯಾಗಿ ಸಾಬೀತುಪಡಿಸಲು ಇಂದು ನೀವು ನಿಮ್ಮ ಸಂಗಾತಿಯೊಂದಿಗೆ ಜಗಳವಾಡಬಹುದು.

### ಮಕರ ರಾಶಿ

ನೀವು ಯೋಗ ಧ್ಯಾನದೊಂದಿಗೆ ದಿನವನ್ನು ಪ್ರಾರಂಭಿಸಬಹುದು. ಇದನ್ನು ಮಾಡುವುದರಿಂದ ನಿಮಗೆ ಪ್ರಯೋಜನಕಾರಿಯಾಗುತ್ತದೆ ಮತ್ತು ದಿನವಿಡೀ ನಿಮ್ಮಲ್ಲಿ ಶಕ್ತಿ ಉಳಿದಿರುತ್ತದೆ. ಇಂದು ಹಣದ ಆಗಮನವು ನಿಮ್ಮನ್ನು ಯಾವುದೇ ಸಮಸ್ಯೆಗಳಿಂದ ಮುಕ್ತಗೊಳಿಸಬಹುದು ಅಂಚೆಯ ಮೂಲಕ ಬರುವ ಒಂದು ಪ್ರಮುಖ ಸಂದೇಶ ಇಡೀ ಕುಟುಂಬಕ್ಕೆ ಸಂತೋಷ ತರುತ್ತದೆ. ಇಂದು ನೀವು ಕುರುಡು ಪ್ರೀತಿಯನ್ನು ಪಡೆಯಲು ಸಾಧ್ಯವಾಗುತ್ತದೆ.

### ಕುಂಭ ರಾಶಿ

ನಿಮ್ಮ ಸಾಮಾನ್ಯ ಜ್ಞಾನದ ಜೊತೆಗೆ ನಿಮ್ಮ ನಿರಂತರ ಪ್ರಯತ್ನ ಖಂಡಿತವಾಗಿಯೂ ಯಶಸ್ಸು ತರುವುದರಿಂದ ತಾಳ್ಮೆಯಿಂದಿರಿ. ಈ ರಾಶಿಚಕ್ರದ ಉದ್ಯಮಿಗಳು, ಇಂದು ನಿಮ್ಮ ಬಳಿ ಹಣವನ್ನು ಕೇಳುತ್ತಾರೆ ಮತ್ತು ನಂತರ ಮರುಪಾವತಿ ಮಾಡದೇ ಇರುವಂತಹ ನಿಮ್ಮ ಮನೆಯ ಸದಸ್ಯರಿಂದ ದೂರವಿರಬೇಕು ಸಂಬಂಧಿಗಳಿದ್ದಲ್ಲಿ ಸಣ್ಣ ಪ್ರಯಾಣ ನಿಮ್ಮ ದೈನಂದಿನ ಒತ್ತಡದ ಜೀವನದಿಂದ ನಿಮಗೆ ಸುಖ ಮತ್ತು ವಿಶ್ರಾಂತಿಯನ್ನು ತರುತ್ತದೆ.

### ಮೀನ ರಾಶಿ

ನೀವು ಜೀವನವನ್ನು ಸಂತೋಷದಿಂದ ಅನುಭವಿಸಲು ಸಿದ್ಧವಾಗುತ್ತಿದ್ದ ಹಾಗೆ ನಿಮಗೆ ಸಂತೋಷ ಹಾಗೂ ಆನಂದ. ನೀವು ನಿಮ್ಮ ಕೋಪವನ್ನು ನಿಯಂತ್ರಿಸಿ ಮತ್ತು ಕಚೇರಿಯಲ್ಲಿ ಎಲ್ಲರೊಂದಿಗೆ ಉತ್ತಮವಾಗಿ ವರ್ತಿಸಿ., ಆಗೇ ನೀವು ಮಾಡದಿದ್ದರೆ ನಿಮ್ಮ ಕೆಲಸ ಹೋಗಬಹುದು. ಸಂಗಾತಿ ಮತ್ತು ಮಕ್ಕಳು ಹೆಚ್ಚುವರಿ ಪ್ರೀತಿ ಮತ್ತು ಕಾಳಜಿ ತೋರಿಸುತ್ತಾರೆ.

# ಜೇನುಗೂಡು ಮಹಿಳಾ ಸಮಾಜದಿಂದ ಶಿಕ್ಷಕ ದಿನಾಚರಣೆ



**ದಾವಣಗೆರೆ :** ಜೇನುಗೂಡು ಮಹಿಳಾ ಸಮಾಜದಿಂದ ಅನನ್ಯ ಆಟಿಸಂ ಶಾಲೆಯಲ್ಲಿ ಶಿಕ್ಷಕ ದಿನಾಚರಣೆಯನ್ನು ಆಚರಿಸಲಾಯಿತು. ಈ ಕಾರ್ಯಕ್ರಮದಲ್ಲಿ ಜೇನುಗೂಡು ಮಹಿಳಾ ಸಮಾಜದ ಅಧ್ಯಕ್ಷ ಸುಜಾತ ನಾಗೇಶ್ ಕಾರ್ಯದರ್ಶಿ ಮಧು ಉಮೇಶ್ ಅನನ್ಯ ಆಟಿಸಂ ಶಾಲೆಯ ಸಂಸ್ಥಾಪಕರ ಡಾಕ್ಟರ್ ಸುಮನ ವೇದಿಕೆಯಲ್ಲಿ ಉಪಸ್ಥಿತರಿದ್ದರು. ಶಾಲೆಯ ಎಲ್ಲಾ ಶಿಕ್ಷಕರಿಗೆ ಜೇನುಗೂಡು ಮಹಿಳಾ ಸಮಾಜದಿಂದ ಆಟ ಆಡಿಸಿ ಬಹುಮಾನ ವಿತರಿಸಲಾಯಿತು. ಪ್ರತಿಯೊಬ್ಬ ಶಿಕ್ಷಕರಿಗೂ ಸನ್ಮಾನಿಸಲಾಯಿತು.

ಡಾಕ್ಟರ್ ಸುಮನ್ನ ಜಿ ಅವರು ಆರ್ಟಿಸಂ ಸಂಬಂಧಪಟ್ಟಂತೆ ಎಲ್ಲಾ ಮಾಹಿತಿಯನ್ನು ತಿಳಿಸಿದರು. ಇಲ್ಲಿಯ ಶಿಕ್ಷಕರು ಮಕ್ಕಳ ಬಗ್ಗೆ ತೋರಿಸುವ ಪ್ರೀತಿ ಕಾಳಜಿ ಶ್ರಮ ತುಂಬಾ ದೊಡ್ಡದು, ಜೇನುಗೂಡು ಮಹಿಳಾ ಸಮಾಜದಿಂದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮವನ್ನು ನಮ್ಮ ಅನನ್ಯ ಆಟಿಸಂ ಮಕ್ಕಳ ಶಾಲೆಯಲ್ಲಿ ಆಚರಣೆ ಮಾಡಿದ್ದು ಒಂದು ಅರ್ಥಪೂರ್ಣ ಶಿಕ್ಷಕರ ದಿನಾಚರಣೆಯ ಆಯ್ತು. ಅನನ್ಯ ಆಟಿಸಂ ಮಕ್ಕಳ ಶಾಲೆ, ದಾವಣಗೆರೆಯಲ್ಲೆ ಪ್ರಸಿದ್ಧಿ ಪಡೆಯಲಿ ಎಂದು ಜೇನುಗೂಡು ಮಹಿಳಾ ಸಮಾಜ ಆಶಿಸುತ್ತದೆ.

ಪ್ರಾರ್ಥನೆ ರೂಪ ಹಾಡಿದರು, ಇವರ ಬಗ್ಗೆ ವ್ಯಕ್ತಿ ಪರಿಚಯ ಮಮತಾ ತುಂಬಾ ಅಚ್ಚುಕಟ್ಟಾಗಿ ವರ್ಣನೆ ಮಾಡಿದರು ಜ್ಯೋತಿ ಅವರು ಸ್ವಾಗತ ಭಾಷಣ ಮಾಡಿದರು. ಸುಮಾ ಏಕಾಂತಪ್ಪ ಕಾರ್ಯಕ್ರಮದ ನಿರೂಪಣೆ ಮಾಡಿದರು, ಶಿವಲೀಲಾ ವಂದನಾರ್ಪಣೆ ಮಾಡಿದರು,

ಜೇನುಗೂಡು ಮಹಿಳಾ ಸಮಾಜದ ಸದಸ್ಯರು ಸುಜಾತ ನಿರ್ಮಲ,ಜ್ಯೋತಿ ಉಷ ಭೀಮಾ ,ಜಯಶ್ರೀ ,ಸುಮಾ ಮತ್ತು ಮಂಜುಳಾ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ಜಾತಿ ಕಾಲಂನಲ್ಲಿ ಹೆಳವ ಎಂದು ಬರೆಸಲು ಮನವಿ

**ದಾವಣಗೆರೆ:** ಸರ್ಕಾರದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಇದೇ ಸೆ.22ರಂದು ನಡೆಸುತ್ತಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಜಾತಿ ಸಮೀಕ್ಷೆಯಲ್ಲಿ ಹೆಳವ ಸಮುದಾಯದವರು ಜಾತಿ ಕಾಲಂನಲ್ಲಿ ಹೆಳವ ಎಂದು ಮತ್ತು ಕೆಲವು ಜಿಲ್ಲೆಗಳಲ್ಲಿ ಪಿಚಗುಂಟಲ ಎಂದಿರುವುದರಿಂದ ಇದ್ದು, ಪಿಚಗುಂಟಲ ಎಂದು ಬರೆಯಿಸಿ ಎಂದು ಕರ್ನಾಟಕ ಹೆಳವ ಜನಾಂಗ ಸಂಘ ತಿಳಿಸಿದೆ. ಕುಲಕಸುಬು ಕೇಳಿದಲ್ಲಿ ವಂಶಾವಳಿ ಹೇಳುವವರು ಎಂದು ಮತ್ತು ಧರ್ಮದ ಕಾಲಂನಲ್ಲಿ ಹಿಂದೂ ಎಂದು ಬರೆಯಿಸಿ. ಒಂದು ವೇಳೆ ಹೆಳವ ಲಿಂಗಾಯಿತ ಅಥವಾ ಬೇರೆ ಹೆಸರಲ್ಲಿ ಜಾತಿಯ ಹೆಸರನ್ನು ಬರೆಯಿಸಿದರೆ, ರೈತರಿಗೆ ಗಂಗಾ ಕಲ್ಯಾಣ ಯೋಜನೆ, ಶಾಲಾ ಮಕ್ಕಳಿಗೆ ವಿದ್ಯಾರ್ಥಿ ವೇತನ, ವಿದ್ಯಾರ್ಥಿ ನಿಲಯದ ವ್ಯವಸ್ಥೆ, ಸ್ವ–ಉದ್ಯೋಗಕ್ಕೆ ಸರ್ಕಾರದ ಸಹಾಯಧನ, ಸರ್ಕಾರಿ ಉದ್ಯೋಗ ಹೀಗೆ ಸರ್ಕಾರದ ಯಾವ ಸವಲತ್ತುಗಳು ಸಿಗುವುದಿಲ್ಲ ಎಂದು ಸಂಘದ ಜಿಲ್ಲಾ ಕಾರ್ಯದರ್ಶಿ ಸಿ. ವಾಸುದೇವ ಪತ್ರಿಕಾಹೇಳಿಕೆಯಲ್ಲಿ ತಿಳಿಸಿದ್ದಾರೆ.

# ಜ್ಞಾನ ಸೃಷ್ಟಿಗೆ ಪ್ರೋತ್ಸಾಹ; ಸೃಜನಶೀಲತೆಗೆ ರಕ್ಷಣೆ : ಪ್ರೊ. ಕರಿಮುನ್ನಿಸಾ ಸಯ್ಯದ್




**ಗದಗ :** ಯಾವುದೇ ದೇಶದ ಆರ್ಥಿಕ ಪ್ರಗತಿಗೆ ಬೌದ್ಧಿಕ ಆಸ್ತಿ ಹಕ್ಕುಗಳು ಮೂಲಾಧಾರವಾಗಿದ್ದು, ಇದು ಹೊಸ ಆವಿಷ್ಕಾರಗಳಿಗೆ ಮತ್ತು ಸೃಜನಶೀಲತೆಗೆ ಪ್ರೋತ್ಸಾಹ ನೀಡುತ್ತದೆ ಎಂದು ಕಾಲೇಜು ಶಿಕ್ಷಣ ಇಲಾಖೆಯ ಧಾರವಾಡ ಪ್ರಾದೇಶಿಕ ಕಚೇರಿಯ ಜಂಟಿ ನಿರ್ದೇಶಕರಾದ ಪ್ರೊ. ಕರಿಮುನ್ನಿಸಾ ಸಯ್ಯದ್ ಹೇಳಿದರು. ಅವರು ಹುಲಕೋಟಿಯ ಶ್ರೀ ಕೆ.ಎಚ್. ಪಾಟೀಲ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ದಿನಾಂಕ : 11–09–2025ರಂದು ಹಮ್ಮಿಕೊಂಡಿದ್ದ 'ಬೌದ್ಧಿಕ ಆಸ್ತಿ ಹಕ್ಕುಗಳು' ಕುರಿತು ಒಂದು ದಿನದ ರಾಜ್ಯಮಟ್ಟದ ಕಾರ್ಯಾಗಾರವನ್ನು ಉದ್ಘಾಟಿಸಿ, ಬೌದ್ಧಿಕ ಆಸ್ತಿ ಹಕ್ಕುಗಳ ಮಹತ್ವದ ಬಗ್ಗೆ ಮಾತನಾಡುತ್ತ ಪ್ರಾಧ್ಯಾಪಕರು ಮತ್ತು ವಿದ್ಯಾರ್ಥಿಗಳು ಬೌದ್ಧಿಕ ಆಸ್ತಿ ಹಕ್ಕುಗಳ ಕುರಿತು ತಿಳಿದುಕೊಳ್ಳುವುದು ಅಗತ್ಯವೆಂದು ಹೆಳಿದರು. ಸಂಪನ್ಮೂಲ ವ್ಯಕ್ತಿಗಳಾದ ಧಾರವಾಡದ ಉನ್ನತ ಶಿಕ್ಷಣ ಅಕಾಡೆಮಿಯ ಡೀನ್ ಡಾ. ಅರುಂಧತಿ ಕುಲಕರ್ಣಿ ಅವರು ಪೇಟೆಂಟಗಳು, ಟ್ರೇಡಮಾರ್ಕಗಳು, ಕೃತಿಸ್ವಾಮ್ಯ, ಕೈಗಾರಿಕಾ ವಿನ್ಯಾಸಗಳು ಸೇರಿದಂತೆ ಹಲವು ವಿಷಯಗಳ ಬಗ್ಗೆ ವಿವರವಾಗಿ ಉಪನ್ಯಾಸ ನೀಡಿದರು. ಗದುಗಿನ ಕೆ.ಎಲ್.ಇ. ಸೊಸೈಟಿಯ ಎಸ್.ಎ. ಮಾನ್ವಿ ಕಾನೂನು ಮಹಾವಿದ್ಯಾಲಯದ ಶಿವಮೂರ್ತಯ್ಯ ಜಿ. ರೇಶ್ಮಿ ಮತ್ತು ಸಹಜಾನಂದ ಕೊಡತಗೇರಿ ಅವರು ಮೂಲಭೂತ ಹಕ್ಕುಗಳು, ಕಾನೂನು ತಿಳುವಳಿಕೆ, ಆನ್‌ಲೈನ್ ಕೃತಿಸ್ವಾಮ್ಯ ಉಲ್ಲಂಘನೆ ಕುರಿತು ಮಾತನಾಡಿದರು.

ಪ್ರಾಂಶುಪಾಲರದಾದ ಪ್ರೊ. ಸುಧಾ ಕೌಜಗೇರಿ ಅಧ್ಯಕ್ಷತೆ ವಹಿಸಿಕೊಂಡಿದ್ದರು. ಐಕ್ಯೂಎಸಿ ಸಂಚಾಲಕರಾದ ಡಾ. ಜಿತೇಂದ್ರ ಜಹಾಗೀರದಾರ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಾಗಾರದಲ್ಲಿ ಬೋಧಕ ಸಿಬ್ಬಂದಿಗಳಾದ ಬಸವರಾಜ ಬಿ. ಪ್ರೊ. ಲಕ್ಷ್ಮಣ ಮುಳಗುಂದ, ಡಾ. ಸಾರಿಕಾ ಪಾಟೀಲ, ರಮೇಶ ಹುಲಕುಂದ, ಡಾ. ಅರುಣಕುಮಾರ, ಸಾವಿತ್ರಿ ಟಿ, ಶ್ವೇತಾ ಪಾಲನಕರ, ಮಹಾಂತೇಶ,

ಹುಸೇನಭಾಷಾ, ಡಾ. ಶ್ರೀಶ ವಿಠ್ಠಲ, ವಿಜಯಕುಮಾರ, ಮನೋಜಕುಮಾರ, ಸುಭಾಸ ಹರಿಹರ, ಬುಳ್ಳಪ್ಪ, ಬೋಧಕೇತರ ಸಿಬ್ಬಂದಿವರ್ಗ, ವಿವಿಧ ಕಾಲೇಜುಗಳಿಂದ ಆಗಮಿಸಿದ ಪ್ರಾಧ್ಯಾಪಕರು, ಪ್ರಾಂಶುಪಾಲರುಗಳು, ವಿದ್ಯಾರ್ಥಿಗಳು ಭಾಗವಹಿಸಿದ್ದರು. ಮಹಾನಂದಾ ಹಿರೇಮಠ ಹಾಗೂ ಭೀಮೇಶ ಕಾರ್ಯಕ್ರಮವನ್ನು ನಿರೂಪಿಸಿದರು. ವಿಜ್ಞಾನ ವಿಭಾಗದ ಮುಖ್ಯಸ್ಥ ಡಾ. ಉಲ್ಲಾಸ ಶೆಟ್ಟಿ ಸ್ವಾಗತಿಸಿದರು. ಕಲಾ ವಿಭಾಗದ ಮುಖ್ಯಸ್ಥ ಮತ್ತು ಎನ್.ಎಸ್.ಎಸ್. ಸಂಯೋಜಕ ಪ್ರೊ. ಅಪ್ಪಣ್ಣ ಹಂಜೆ ವಂದನಾರ್ಪಣೆಗೈದರು.

# ಅಂಚೆ ಮಹಾ ಉದ್ಯಮ ಸಪ್ತಾಹ ಸೆ.15 ರಿಂದ 20 ವರಿಗೆ ವಿಶೇಷ ಅಭಿಯಾನ ಅಂಚೆ ಅಧೀಕ್ಷಕ ರಮೇಶ ಮಡಿವಾಳರ



**ಗದಗ:** ಅಂಚೆ ಇಲಾಖೆ ತನ್ನ ಮೂಲ ಉದ್ಯಮ ಸೇವೆ ವಿಸ್ತರಿಸಿ ಮಹಾ ಉದ್ಯಮ ಸಪ್ತಾಹವನ್ನು ಗದಗ ವಿಭಾಗೀಯದಲ್ಲಿ ಸೆ.15 ರಿಂದ 20 ವರಿಗೆ ವಿಶೇಷ ಅಂಚೆ ಮಹಾ ಉದ್ಯಮ ಸಪ್ತಾಹ ಆಯೋಜಿಸಲಾಗಿದೆ ಎಂದು ಗದಗ ವಿಭಾಗೀಯ ಅಂಚೆ ಅಧೀಕ್ಷಕ ರಮೇಶ ಮಡಿವಾಳರ ಹೇಳಿದರು.

ಗದಗ ಪ್ರಧಾನ ಅಂಚೆ ಕಚೇರಿಯಲ್ಲಿ ಬುಧವಾರ ನಡೆದ ಮಹಾ ಉದ್ಯಮ ಸಪ್ತಾಹ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಈ ಅಭಿಯಾನದಲ್ಲಿ ಜಿಲ್ಲೆಯ ಬ್ಯಾಂಕಿಂಗ್, ಗುಡಿ ಕೈಗಾರಿಕೆ, ಸಣ್ಣ ಉದ್ಯಮ, ಹಣಕಾಸು ಸಂಸ್ಥೆಗಳು, ಸರಕಾರ ಸಂಘ ಸಂಸ್ಥೆಗಳು, ಶಿಕ್ಷಣ ಸಂಸ್ಥೆಗಳು, ವಿವಿಧ ಉತ್ಪನ್ನಗಳಿಗೆ, ಇ–ಕಾಮಸ್ ಮಾರಾಟಗಾರರು ಸೇರಿದಂತೆ ಸಾಮಾನ್ಯ ಗ್ರಾಹಕವರಿಗೂ ವಿವಿಧ ಅಂಚೆ ಸೇವೆ ಪರಿಚಯಿಲಾಗುತ್ತಿದೆ ಎಂದರು.

ಸಪ್ತಾಹದ ವೇಳೆಯಲ್ಲಿ ಗ್ರಾಹಕರಿಗೆ ಸ್ಪೀಡ್ ಪೋಸ್ಟ್, ಪಾರ್ಸಲ್, ಸಿಓಡಿ (ಅಔಆ) ಸೇವೆಗಳ ಪ್ರಚಾರದ ಜೊತೆಗೆ ಹೊಸ ಗ್ರಾಹಕರನ್ನು ಅಂಚೆ ಇಲಾಖೆಯ ವ್ಯಾಪ್ತಿಗೆ ತರಲಾಗುತ್ತದೆ. ಸರಕಾರಿ ಹಾಗೂ ಖಾಸಗಿ ಸಂಸ್ಥೆಗಳೊಂದಿಗೆ ಹೊಸ ಒಪ್ಪಂದ ಮೂಲಕ ಸ್ಥಳೀಯ ಉತ್ಪನ್ನಗಳನ್ನು ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಾರುಕಟ್ಟೆಗೂ ತಲುಪಿಸುವ ಅವಕಾಶ ಬಗೆಗೆ ಗ್ರಾಹಕರಿಗೆ ತಿಳುವಳಿಕೆ ಮೂಡಿಸಿ, ಅವಕಾಶ ಕಲ್ಪಿಸಲಾಗುತ್ತದೆ. ವರ್ಷದ 12 ತಿಂಗಳ ಕಾಲವೂ ದೇಶದ ಕಟ್ಟಕಡೆಯ ವ್ಯಕ್ತಿಗೂ ಅಂಚೆ ಸೇವೆ ನೀಡುವ ಉನ್ನತ ತಂತ್ರಜ್ಞಾನದ ಜೊತೆಗೆ ಅಪಾರ ಪ್ರಮಾಣದ ಮಾನವ ಸಂಪನ್ಮೂಲ, ಅತ್ಯಂತ ದೊಡ್ಡದಾದ ಸಂಪರ್ಕ ಜಾಲ ಅಂಚೆ ಇಲಾಖೆ ಹೊಂದಿದೆ. ಇದು ಗ್ರಾಹಕರ ಸ್ನೇಹಿಯಾಗಿ ಖಾಸಗಿ ಸಂಸ್ಥೆಗಳಿಂದ ದೊರೆಯದ ಗ್ರಾಮೀಣ ಪ್ರದೇಶಗಳಿಗೂ ವ್ಯಾಪಾರಸ್ಥರು ತಮ್ಮ ಉತ್ಪನ್ನಗಳನ್ನು ಮಾರುಕಟ್ಟೆ ಪಡೆಯಲು ಸಹಕಾರಿಯಾಗಿದೆ ಎಂದರು.

ಗದಗ ಉಪ ವಿಭಾಗದ ಸಹಾಯಕ ಅಂಚೆ ಅಧೀಕ್ಷಕ ಶ್ರೀಕಾಂತ ಜಾಧವ ಮಾತನಾಡಿ, ಈ ಅಭಿಯಾನದಿಂದ ಗ್ರಾಹಕರು ಹಲವು ರೀತಿಯ ಪ್ರಯೋಜನಗಳನ್ನು ಪಡೆಯುತ್ತಾರೆ. ದಾಖಲೆಗಳು, ಪಾರ್ಸಲ್ ಗಳು ವೇಗವಾಗಿ ವಿಶ್ವಾಸಾರ್ಹವಾಗಿ ನಂಬಿಕೆಯೊಂದಿಗೆ ಗ್ರಾಹಕರ ನಿರೀಕ್ಷೆ ತಕ್ಕಂತ ಸೇವೆ ನೀಡುವದರಿಂದಾಗಿ ಗ್ರಾಹಕರು ತಮ್ಮ ದಿನನಿತ್ಯದ ಅಗತ್ಯಗಳಿಗೆ ಅಂಚೆ ಇಲಾಖೆ ಸೇವೆಗಳನ್ನು ಪಡೆಯಲು ಸಾಧ್ಯವಾಗುತ್ತದೆ ಎಂದರು.

ರೋಣ ಉಪ ವಿಭಾಗದ ಸಹಾಯಕ ನಿರೀಕ್ಷಕ ವೆಂಕಟೇಶರಡ್ಡಿ ಕೊಳ್ಳಿ ಪ್ರಾಸ್ತವಿಕವಾಗಿ ಮಾತನಾಡಿ, ಸ್ಥಳೀಯ ವಿವಿಧ ಉತ್ಪನ್ನಗಳಿಗೆ ದೇಶದ ಎಲ್ಲೆಡೆ ಮಾರುಕಟ್ಟೆ ತಲುಪಲು ಸುಲಭವಾಗಿಸಲಿದೆ. ಸರ್ಕಾರಿ ಮತ್ತು ಖಾಸಗಿ ಸಂಘ ಸಂಸ್ಥೆಗಳಿಗೆ ತ್ವರಿತ ಮತ್ತು ತಂತ್ರಜ್ಞಾನ ಆಧಾರಿತದಲ್ಲಿಯೇ ವಿವಿಧ ಗ್ರಾಹಕರಿಗೆ ರಿಯಾಯಿತಿ ದರದಲ್ಲಿ ಸೇವೆ ನೀಡಲಾಗುತ್ತದೆ. ಹಾಗಾಗಿ ಪ್ರತಿಯೊಬ್ಬ ಗ್ರಾಹಕರು ಈ ಅಂಚೆ ಮಹಾ ಉದ್ಯಮ ಮೇಳದ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಅಂಚೆ ಇಲಾಖೆ ಗದಗ ಮಾರುಕಟ್ಟೆ ವ್ಯವಸ್ಥಾಪಕ ವೆಂಕಟೇಶ ಆಕಳವಾಡಿ ಮಾತನಾಡಿ, ಅಂಚೆ ಇಲಾಖೆಯ ಮನೆ ಬಾಗಿಲಿಗೆ ಬಂದು ಪಾರ್ಸಲ್, ಸ್ಪೀಡ್ ಪೋಸ್ಟ್ ಬುಕ್ಕಿಂಗ್ ಜೊತೆಗೆ ವ್ಯಾಪಾರ ವಹಿವಾಟು ಉತ್ತೇಜನ ಕಲ್ಪಿಸುವ ಸಲುವಾಗಿ ಕಡಿಮೆ ಸೇವಾ ಶುಲ್ಕದಿಂದ ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ವ್ಯವಹಾರಕ್ಕೆ ವಿವಿಧ ಸೇವೆ ನೀಡಲಾಗುತ್ತದೆ. ಗ್ರಾಹಕರು ಈ ಸೇವೆಗಳ ಸದ್ಬಳಕೆಗೆ ಮಾಡಿಕೊಳ್ಳಬೇಕು ಎಂದರು.

ಪ್ರಧಾನ ಅಂಚೆ ಪಾಲಕರಾದ ಮಂಜುಳಾ ದೇಗಿನಾಳ ಅಧ್ಯಕ್ಷತೆವಹಿಸಿ ಮಾತನಾಡಿದರು.

ಗದಗ ವಿಭಾಗೀಯ ಸಹಾಯಕ ಅಂಚೆ ಅಧೀಕ್ಷಕ ವಿ.ಸುನೀಲಕುಮಾರ ಮತ್ತಿತರು ಪಾಲ್ಗೊಂಡಿದ್ದರು. ನಿಂಗಪ್ಪ ಹೂಗಾರ ನಿರೂಪಿಸಿ, ವಂದಿಸಿದರು. ಗದಗ –ಬೆಟಗೇರಿ, ಗದಗ ನಗರ, ಗದಗ, ರೋಣ ಉಪ ವಿಭಾಗದ ಸಿಬ್ಬಂದಿ ಪಾಲ್ಗೊಂಡಿದ್ದರು.

# ಗೋಪಾಲಕೃಷ್ಣ ಎಸ್ ಇವರಿಗೆ ಯೋಗ ರತ್ನ ಪ್ರಶಸ್ತಿಯ ಗರಿ



**ಶಿವಮೊಗ್ಗ :–** ನಿರಂತರ 35 ವರ್ಷಗಳಿಂದ ಸಾರ್ವಜನಿಕರಿಗೆ ಯೋಗ ಆರೋಗ್ಯವನ್ನು ಪ್ರತಿ ನಿತ್ಯ ನೀಡುತ್ತಿರುವ ಯೋಗ ತಜ್ಞರಾದ ಗೋಪಾಲಕೃಷ್ಣ ಎಸ್ ಇವರ ಯೋಗ ಕ್ಷೇತ್ರದ ಸಾಧನೆ ಮತ್ತು ಸೇವೆಯನ್ನು ಸೇವೆಯನ್ನು ಗುರುತಿಸಿ ಬೆಂಗಳೂರಿನ ಗ್ಲೋಬಲ್ ಯೋಗ ಕಲ್ಯಾಣ್ ಮತ್ತು ಯೋಗ ಯುನಿವರ್ಸಿಟಿ ಆಫ್ ಅಮೇರಿಕನ್ಸ್ ಗುರುತಿಸಿ ಯೋಗ ರತ್ನ–2025 ಎಂಬ ಬಿರುದು ಪ್ರಶಸ್ತಿಯನ್ನು ಶಿಕ್ಷಕರ ದಿನಾಚರಣೆಯಂದು ಬೆಂಗಳೂರಿನ ಶ್ರೀ ಪುಟ್ಟಣ್ಣ ಚೆಟ್ಟಿ ಟೌನ್ ಹಾಲ್‌ನಲ್ಲಿ ಏರ್ಪಡಿಸಿದ್ದ ಸಮಾರಂಭದಲ್ಲಿ ನೀಡಿ ಗೌರವಿಸಲಾಯಿತು.

ಯೂನಿವರ್ಸಿಟಿಯ ಡೀನ್ ಉಪಾಧ್ಯಕ್ಷರಾದ ಡಾ. ಎಸ್ ಎಸ್ ಹಿರೇಮಠ್ ಉಪ ಕುಲಪತಿಗಳಾದ ಡಾ. ಯೋಗಿ ದೇವರಾಜ್ ಮತ್ತು ಡಾ. ಅರಳುಮಲ್ಲಿಗೆ ಪಾರ್ಥಸಾರಥಿ ಹಾಗೂ ಗೌರಿ ಗದ್ದೆ ಆಶ್ರಮದ ಶ್ರೀ ವಿನಯ ಗುರೂಜಿ ಅವಧೂತರವರು ಯೋಗ ರತ್ನ ಪ್ರಶಸ್ತಿ ಮತ್ತು ಫಲಕವನ್ನು ನೀಡಿ ಗೌರವಿಸಿದರು. ಗಣ ರಾಜ್ಯೋತ್ಸವ ಪ್ರಶಸ್ತಿ, ಯೋಗ ಸಾಮ್ರಾಟ್, ಯೋಗ ಪುರುಷೋತ್ತಮ, ಯೋಗ ಜ್ಞಾನ ಗಂಗಾ, ಯೋಗ ವೈಭವ, ಅಜಿತಶ್ರೀ ಪುರಸ್ಕಾರ, ರೋಟರಿ ವತಿಯಿಂದ ಎಕ್ಸ್‌ಲೆನ್ಸಿ ಅವಾರ್ಡ್, ಸುವರ್ಣ ಕರ್ನಾಟಕ, ಪತಂಜಲಿ ರತ್ನ ಇನ್ನೂ ಮುಂತಾದ ಪ್ರಶಸ್ತಿ ಪುರಸ್ಕಾ ಪಡೆದಿರುವ ಇವರಿಗೆ ಕೇಂದ್ರದ ಯೋಗ ಬಂಧುಗಳು, ವಿಪ್ರಟ್ರಸ್ಟ್, ಶ್ರೀ ಅನ್ನಪೂರ್ಣೇಶ್ವರಿ ಟ್ರಸ್ಟ್, ತಾಲ್ಲೂಕು ಬ್ರಾಹ್ಮಣ ಸಂಘ ಮತ್ತು ಮಾಧ್ಯಮ ದವರು ಅಭಿನಂದಿಸಿದ್ದಾರೆ.

# ಟ್ರಾನ್ಸ್ ಜಂಡರ್ ಮತ್ತು ದೇವದಾಸಿ ಮಹಿಳೆಯರ ಮರು ಸಮೀಕ್ಷೆ




**ಗದಗ :** ಲಿಂಗತ್ವ ಅಲ್ಪಸಂಖ್ಯಾತರ (ಟ್ರಾನ್ಸಂಡರ್) ಮತ್ತು ದೇವದಾಸಿ ಮಹಿಳೆಯರ ಮರು ಸಮೀಕ್ಷೆ ಸೆಪ್ಟೆಂಬರ್ 15 ರಿಂದ 45 ದಿನಗಳ ಕಾಲ ರಾಜ್ಯಾದ್ಯಂತ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಪ್ರಾರಂಭವಾಗುತ್ತಿದೆ. ಜಿಲ್ಲೆಯಲ್ಲಿ ಮಾನ್ಯ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅವರು ಪೋಸ್ಟರ್ ಬಿಡುಗಡೆ ಮಾಡುವದರ ಮೂಲಕ ಸಮೀಕ್ಷೆ ಕಾರ್ಯಕ್ಕೆ ಚಾಲನೆ ನೀಡಿದರು.ಈ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ಶ್ರೀಮತಿ.ಪದ್ಮಾವತಿ.ಜಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಶ್ರೀಮತಿ.ಅನುಪಮಾ ಅಂಗಡಿ, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಭಿವೃದ್ಧಿ ನಿರೀಕ್ಷಕರಾದ ಶ್ರೀಮತಿ ದಾಕ್ಷಾಯಣಿ ಪಾಟೀಲ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಶ್ರೀಮತಿ ರಫೀಕಾ

ಹಳ್ಳೂರ ಮತ್ತು ಇಲಾಖಾ ಸಿಬ್ಬಂದಿಗಳು ಹಾಗೂ ಸಮುದಾಯ ಆಧಾರಿತ ಸಂಸ್ಥೆಯವರು ಭಾಗವಹಿಸಿದ್ದರು. ಮಾನ್ಯ ವ್ಯವಸ್ಥಾಪಕ ನಿದೇಶಕರು, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ ಬೆಂಗಳೂರು ಇವರ ನಿರ್ದೇಶನದಂತೆ ಲಿಂಗತ್ವ ಅಲ್ಪಸಂಖ್ಯಾತರ ( ಟ್ರಾನ್ಸ್ಜೆಂಟರ್) ಮತ್ತು ದೇವದಾಸಿ ಮರು ಸಮೀಕ್ಷೆಯನ್ನು ರಾಜ್ಯಾದ್ಯಂತ ಸೆಪ್ಟೆಂಬರ್ 15 ರಿಂದ 45 ದಿನಗಳ ಕಾಲಾವಕಾಶದಲ್ಲಿ ದೇವದಾಸಿ ಮಹಿಳೆಯರ ಸಮೀಕ್ಷೆಯನ್ನು ತಾಲೂಕಾ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯಲ್ಲಿ ಮತ್ತು ಲಿಂಗತ್ವ ಅಲ್ಪಸಂಖ್ಯಾತರ ಸಮೀಕ್ಷೆಯನ್ನು ತಾಲೂಕು ಆಸ್ಪತ್ರೆಗಳಲ್ಲಿ ನಡೆಸಲಾಗುತ್ತಿದೆ.

ದೇವದಾಸಿ ಮಹಿಳೆಯರು ಹಾಗೂ ಲಿಂಗತ್ವ ಅಲ್ಪಸಂಖ್ಯಾತರು ನಿಗದಿಪಡಿಸಿದ ಅವಧಿಯೊಳಗಾಗಿ ಮೇಲ್ಕಂಡ ನಿಗದಿಪಡಿಸಿದ ಸ್ಥಳಗಳಲ್ಲಿ ಸಮೀಕ್ಷೆಯಲ್ಲಿ ಭಾಗವಹಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರು ಹಾಗೂ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮವನ್ನು ಸಂಪರ್ಕಿಸಬಹುದಾಗಿದೆ.

# ಯಾವುದೇ ರಾಜಕೀಯ ಪಕ್ಷಗಳು ಭದ್ರಾ ಬಲದಂಡೆ ನಾಲೆ ಸೀಳಿರುವ ವಿಚಾರದಲ್ಲಿ ರಾಜಕೀಯ ಮಾಡದೇ ರೈತರ ಹಿತಕಾಯಲಿ: ಮಂಡಲೂರು ವಿಶ್ವನಾಥ

**ದಾವಣಗೆರೆ:** ಜಿಲ್ಲೆಯ ರೈತರಿಗೆ ಜೀವನಾಡಿಯಾಗಿರುವ ಭದ್ರಾ ಜಲಾಶಯದಿಂದ ಹೊಳಲ್ಕೆರೆ ಕ್ಷೇತ್ರಕ್ಕೆ ಕುಡಿಯುವ ನೀರು ಹರಿಸಲು ರೈತರಿಂದ ಯಾವುದೇ ಆಕ್ಷೇಪಣೆ ಇಲ್ಲ. ಆದರೆ, ಬಲದಂಡೆ ನಾಲೆಯಿಂದ ಹರಿಸಲು ಮುಂದಾಗಿರುವುದರಿಂದ ಭದ್ರಾ ಅಚ್ಚುಕಟ್ಟು ಪ್ರದೇಶದ ರೈತರಿಗೆ ಹಾಗೂ ಕೊನೆಭಾಗದ ರೈತರಿಗೆ ನೀರು ಸಿಗದೆ ತೊಂದರೆ ಆಗುವ ಮುನ್ಸೂಚನೆ ಸ್ಪಷ್ಟವಾಗಿರುವುದರಿಂದ ಈ ಕಾಮಗಾರಿಗೆ ರೈತರಿಂದ ವಿರೋಧವಿದೆ ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ದಾವಣಗೆರೆ ತಾಲ್ಲೂಕು ಅಧ್ಯಕ್ಷ ಮಂಡಲೂರು ವಿಶ್ವನಾಥ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಮತ್ತು ಬಿಜೆಪಿ ಉಭಯ ಪಕ್ಷಗಳು ಈಚೆಗೆ ಜಿಲ್ಲಾ ರೈತ ಒಕ್ಕೂಟ ಸಭೆ ಕರೆದಿದ್ದವು. ಕಾಂಗ್ರೆಸ್‌ನ ಮುಖಂಡರು ಭದ್ರಾ ಬಲದಂಡೆ ಸೀಳಿ ನಡೆಸಿರುವ ಕಾಮಗಾರಿಯಿಂದ ರೈತರಿಗೆ ಯಾವುದೇ ತೊಂದರೆ ಆಗುವುದಿಲ್ಲವೆಂದು ತಿಳಿಸುತ್ತಾರೆ. ಸೆ. 9ರಂದು ಬಿಜೆಪಿ ನೇತೃತ್ವದಲ್ಲಿ ಕರೆದ ರೈತರ ಸಭೆಯಲ್ಲಿ ಭದ್ರಾ ನಾಲೆಯಿಂದ ಕುಡಿಯುವ ನೀರಿಗೆ ಯಾವುದೇ ರೀತಿ ಆಕ್ಷೇಪಣೆ ಇಲ್ಲ. ಆದರೆ ಭದ್ರಾ ನಾಲೆಯನ್ನು ಸೀಳಿ ನೀರನ್ನು ತೆಗೆದುಕೊಂಡು ಹೋಗುವುದು ತಪ್ಪು ಎಂದು ರೈತರಿಗೆ ತಿಳಿಸಿ ಹೇಳುತ್ತಾರೆ. ಇದರಿಂದ ರೈತರು ಯಾವುದನ್ನು ನಂಬಬೇಕು ಯಾವುದನ್ನು ಬಿಡಬೇಕು ಎಂಬ ಗೊಂದಲದಲ್ಲಿದ್ದಾರೆ ಎಂದರು.ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಸೇನೆ ಭದ್ರಾ ನಾಲೆಯನ್ನು ವೀಕ್ಷಣೆ ಮಾಡಿ ಅಲ್ಲಿನ ಪರಿಸ್ಥಿತಿಯನ್ನು ಮನಗಂಡು ಮುಂದೆ ನಾವು ಹೋರಾಟದ ಬಗ್ಗೆ ಜಿಲ್ಲೆಯ ಎಲ್ಲಾ ರೈತ ಮುಖಂಡರನ್ನು ಸಭೆ ಕರೆದು ಚರ್ಚಿಸಿ ತೀರ್ಮಾನಿಸುತ್ತೇವೆ. ಹೊನ್ನಾಳಿ ಶಾಸಕರಾದ ಶಾಂತನಗೌಡ್ರು ಹಾಗೂ ಹೊನ್ನಾಳಿ ಮಾಜಿ ಸಚಿವ ಎಂ.ಪಿ ರೇಣುಕಾಚಾರ್ಯ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಹಾಗೂ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಇವರೆಲ್ಲರೊಂದಿಗೆ ಪ್ರತ್ಯೇಕವಾಗಿ ಚರ್ಚಿಸುತ್ತೇವೆ ಎಂದು ತಿಳಿಸಿದರು.ದಾವಣಗೆರೆ ಜಿಲ್ಲಾ ರೈತರ ಹಿತದೃಷ್ಟಿಯಿಂದ ಪಕ್ಷಬೇಧ ಮರೆತು ಎಲ್ಲಾ ಪಕ್ಷದ ಹಾಲಿ ಮತ್ತು ಮಾಜಿ ಶಾಸಕರು, ಪಕ್ಷದ ಮುಖಂಡರು ಸೇರಿ ಭದ್ರಾ ನಾಲೆಯಿಂದ ರೈತರಿಗೆ ಬೆಳೆಯುವ ಬೆಳೆಗಳಿಗೆ ಹಾಗೂ ಕೊನೆ ಭಾಗದ ನೀರು ಒದಗಿಸುವ ಕಾರ್ಯ ಮಾಡಬೇಕು. ಕಾರಣ ಯಾವುದೇ ರಾಜಕೀಯ ಪಕ್ಷಗಳು ರಾಜಕೀಯ ಮಾಡದೇ ತಮ್ಮ ವೈಮನಸ್ಸು ಬಿಟ್ಟು ರೈತರಿಗೆ ನೀರು ಹರಿಸಬೇಕೆಂದರು.ಸುದ್ದಿಗೋಷ್ಠಿಯಲ್ಲಿ ಎಸ್.ಜಿ.ರಮೇಶ್, ಕೆ.ಎಸ್. ರೇವಣಸಿದ್ದಪ್ಪ, ಎಸ್.ವಿ.ನಾಗರಾಜಪ್ಪ, ಶಿವಕುಮಾರ್ ಇತರರು ಇದ್ದರು.

# ಸಂಪರ್ಕ ಸಭೆ

**ಗದಗ :** ಕರ್ನಾಟಕ ಲೋಕಾಯುಕ್ತ ಗದಗ ಕಚೇರಿಯ ಪೊಲೀಸ್ ಅಧಿಕಾರಿಗಳು ಸೆಪ್ಟೆಂಬರ್ 16 ರ ಮಂಗಳವಾರದಂದು ಬೆಳಿಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 12.30 ಗಂಟೆಯವರೆಗೆ ಲಕ್ಷ್ಮೇಶ್ವರ ತಾಲೂಕಿನ ಶಿಗ್ಲಿಯಲ್ಲಿ ಗ್ರಾಮ ಪಂಚಾಯತ್ ಕಾರ್ಯಾಲಯದಲ್ಲಿ ಲೋಕಾಯುಕ್ತ ಜನ ಸಂಪರ್ಕ ಸಭೆ ಮತ್ತು ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಸಾರ್ವಜನಿಕರಿಂದ ದೂರು ಅಹವಾಲುಗಳನ್ನು ಸ್ವೀಕರಿಸಲಾಗುವುದು ಎಂದು ಗದಗ ಕರ್ನಾಟಕ ಲೋಕಾಯುಕ್ತ ಪೊಲೀಸ ಉಪಾಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಾಡಿಗೆ ಕಟ್ಟಡ ಬೇಕಾಗಿದೆ

**ಬಳ್ಳಾರಿ:** ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವ್ಯಾಪ್ತಿಯ ಪ್ರಸಕ್ತ ಸಾಲಿನ ನಗರದ ಸರ್ಕಾರಿ ಮೆಟ್ರಿಕ್ ನಂತರದ ಬಾಲಕೀಯರ ವಿದ್ಯಾರ್ಥಿ ನಿಯಯದಲ್ಲಿ ಅಧಿಕ ವಿದ್ಯಾರ್ಥಿಗಳು ಪ್ರವೇಶಾತಿ ಪಡೆದಿದ್ದು, ವಿದ್ಯಾರ್ಥಿನಿಲಯ ನಿರ್ವಹಣೆಗಾಗಿ 100 ವಿದ್ಯಾರ್ಥಿಗಳ ವಾಸಕ್ಕೆ ಬಳ್ಳಾರಿ ನಗರ ವ್ಯಾಪ್ತಿಯಲ್ಲಿ ಕಟ್ಟಡವನ್ನು ಬಾಡಿಗೆಗೆ ನೀಡಲು ಇಚ್ಚಿಸುವ ಕಟ್ಟಡಗಳ ಮಾಲೀಕರು ಸಂಪರ್ಕಿಸಬಹುದು. ಆಸಕ್ತ ಕಟ್ಟಡ ಮಾಲೀಕರು ಸೆಪ್ಟೆಂಬರ್ 11 ರೊಳಗೆ ಅಗತ್ಯ ದಾಖಲೆಗಳೊಂದಿಗೆ ನಗರದ ನಲ್ಲಚೆರುವು ಪ್ರದೇಶದ ವಾಲ್ಮೀಕಿ ಭವನದ ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು.

# ನಿಧನ ಸುದ್ದಿಗಳು

### ಮದ್ದೇರು ವೀರಭದ್ರಪ್ಪ ನಿಧನ

**ಮಾಯಕೊಂಡ:** ಇಲ್ಲಿನ ನಿವಾಸಿ, ಮದ್ದೇರು ಗ್ರಾಮದ ವೀರಭದ್ರಪ್ಪ (60) ಬುಧವಾರ ಮಧ್ಯಾಹ್ನ ನಿಧನರಾದರು.

ಇವರಿಗೆ ಪತ್ನಿ ಉಪನ್ಯಾಸಕಿ ಗೀತಾ, ಪುತ್ರಿ, ಪುತ್ರ ಇದ್ದಾರೆ. ಅಂತ್ಯಕ್ರಿಯೆ ಶುಕ್ರವಾರ ದಾವಣಗೆರೆಯ ವೀರಶೈವ ರುದ್ರಭೂಮಿಯಲ್ಲಿ ನಡೆಯಲಿದೆ ಎಂದು ಕುಟುಂಬದವರು ತಿಳಿಸಿದ್ದಾರೆ.

# ಸೈಕಲ್ ಜಾಥಾಗೆ ನೊಂದಣಿ ಪ್ರಾರಂಭ

**ಗದಗ :** ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯನ್ನು ಸೆಪ್ಟೆಂಬರ್ 15ರಂದು ಆಚರಿಸಲಾಗುತ್ತಿದ್ದು, ದಿನಾಚರಣೆಯ ನಿಮಿತ್ತ ಜಿಲ್ಲಾಧಿಕಾರಿಗಳು, ಗದಗ ರವರು ಸೆಪ್ಟೆಂಬರ್ 15ರಂದು ಬೆಳಿಗ್ಗೆ 6.30 ಗಂಟೆಗೆ ಬಸವೇಶ್ವರ ಸರ್ಕಲ್‌ನಿಂದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದ ವರೆಗೆ ಸೈಕಲ್ ಜಾಥವನ್ನು ಹಮ್ಮಿಕೊಳ್ಳಲು ಸೂಚಿಸಿರುತ್ತಾರೆ.

ಸೈಕಲ್ ಜಾಥಾದಲ್ಲಿ ಭಾಗವಹಿಸಲು 14 ವರ್ಷ ಮೇಲ್ಪಟ್ಟ ಪುರುಷರು ಮಹಿಳೆಯರು ಸಾರ್ವಜನಿಕರು ವಿದ್ಯಾರ್ಥಿಗಳು ಹಾಗೂ ಸರ್ಕಾರಿ ಅಧಿಕಾರಿಗಳು ಸಿಬ್ಬಂದಿಗಳು ಸೇರಿದಂತೆ ಎಲ್ಲರೂ ಭಾಗವಹಿಸಬಹುದಾಗಿದ್ದು ಸೈಕಲ್ ಜಾಥಾದಲ್ಲಿ ಭಾಗವಹಿಸುವವರು https://forms.gle/V73qVTmaX9cB1m7t8

ಈ ಲಿಂಕ್ ಮೂಲಕ ಸೆಪ್ಟೆಂಬರ್ 13ರ ಸಂಜೆ 5 ಗಂಟೆಯೊಳಗೆ ನೊಂದಾಯಿಸಿಕೊಳ್ಳಬಹುದಾಗಿರುತ್ತದೆ.

# ಜಿಲ್ಲಾಮಟ್ಟದ ಅಧಿಕಾರಿಗಳು, ಹಾಗೂ ತಾಲೂಕು ಮಟ್ಟದ ಅಧಿಕಾರಿಗಳ ಗಮನಕ್ಕೆ

**ಗದಗ :** ದಿನಾಂಕ:15–09–2025 ರಂದು ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯನ್ನು ಜಿಲ್ಲಾಧಿಕಾರಿಗಳ ಆಡಿಟೋರಿಯಮ್ ಹಾಲ್‌ನಲ್ಲಿ ಬೆಳಿಗ್ಗೆ 10 ಗಂಟೆಗೆ ಆಚರಿಸಲಾಗುತ್ತಿದೆ. ಕಾರ್ಯಕ್ರಮಕ್ಕೆ ಎಲ್ಲಾ ಜಿಲ್ಲಾಮಟ್ಟದ ಅಧಿಕಾರಿಗಳು, ಗದಗ ತಾಲೂಕು ಮಟ್ಟದ ಅಧಿಕಾರಿಗಳು, ಪರಿಶಿಷ್ಟ ವರ್ಗಗಳ ಪರಿಶಿಷ್ಟ ಜಾತಿಗಳ ಹಿಂದುಳಿದ ವರ್ಗಗಳ ಅಲ್ಪಸಂಖ್ಯಾತ ವರ್ಗಗಳ ಮುಖಂಡರುಗಳು ಹಾಗೂ ಸರ್ವಸದಸ್ಯರು, ಗಣ್ಯ ವ್ಯಕ್ತಿಗಳು, ಸಂಘ ಸಂಸ್ಥೆಯ ಪದಾಧಿಕಾರಿಗಳು ದಿನಾಂಕ: 15–09–2025 ರಂದು ನಡೆಯುವ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ಕಾರ್ಯಕ್ರಮಕ್ಕೆ ಆಗಮಿಸಬೇಕೆಂದು ಕೋರಿದೆ.

# 2025ನೇ ಸಾಲಿನ ಐಟಿಐ ಪ್ರವೇಶದ ದಿನಾಂಕ ವಿಸ್ತರಣೆ.

**ದಾವಣಗೆರೆ :** ರಾಜ್ಯದಲ್ಲಿನ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ 2025ನೇ ಸಾಲಿಗೆ ಪ್ರವೇಶ ಹೊಂದಲು ಡಿ.ಜಿ.ಟಿ ನವದೆಹಲಿರವರು ಪ್ರವೇಶ ಅವಧಿಯನ್ನು ದಿನಾಂಕ 30/9/2025 ರ ವರೆಗೆ ವಿಸ್ತರಿಸಿರುತ್ತಾರೆ ಎಸ್.ಎಸ್.ಎಲ್.ಸಿ ಉತ್ತೀರ್ಣರಾದ ಆಸಕ್ತರು ರಾಜ್ಯದಲ್ಲಿನ ಸರ್ಕಾರಿ/ಅನುದಾನಿತ/ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳ ಪ್ರಾಚಾರ್ಯರನ್ನು ಸಂಪರ್ಕಿಸಿ ಪ್ರವೇಶಕ್ಕೆ ಲಭ್ಯವಿರುವ ವಿವಿದ ವೃತ್ತಿಗಳಲ್ಲಿ ನೇರ ಪ್ರವೇಶ ಹೊಂದಲು ಅವಕಾಶ ವಿರುತ್ತದೆ. ಆಸಕ್ತರು ಹೆಚ್ಚಿನ ಮಾಹಿತಿಗೆ ಸಂಬಂದಿಸಿದ ಪ್ರಾಚಾರ್ಯರನ್ನು ಸಂಪರ್ಕಿಸಬಹುದಾಗಿದೆ ಎಂದು ನಗರದ ಶ್ರೀ ಜಗದ್ಗುರು ಪಂಚಾಚಾರ್ಯ ಐಟಿಐ ಪ್ರಾಚಾರ್ಯರಾದ ಶ್ರೀ ಪರಮೇಶ್ವರಪ್ಪ.ಡಿ.ಎನ್ ಇವರು ತಮ್ಮ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ಒಡೆದ ನಾಲೆ; ನೀರು ಪೋಲು

## ನೀರಾವರಿ ಇಲಾಖೆ ನಿರ್ಲಕ್ಷ್ಯವೇ ಕಾರಣ: ರೈತರ ಆರೋಪ

**ಸಾಸ್ವೆಹಳ್ಳಿ:** ಸಮೀಪದ ಕ್ಯಾಸಿನಕೆರೆ ಪಶು ವೈದ್ಯಕೀಯ ಆಸ್ಪತ್ರೆ ಹಿಂಭಾಗ ಭದ್ರಾ ನಾಲೆಯ ಅಕ್ಕಡಕ್ ಬುಧವಾರ ರಾತ್ರಿ ಒಡೆದಿದ್ದು, ನೀರು ಹಳ್ಳದ ಮೂಲಕ ನದಿ ಸೇರುತ್ತಿದೆ. ನೀರಾವರಿ ಇಲಾಖೆಯ ನಿರ್ಲಕ್ಷ್ಯವೇ ಇದಕ್ಕೆ ಕಾರಣ ಎಂದು ರೈತರು ಆರೋಪಿಸಿದ್ದಾರೆ.

ಮಾರ್ಚ್ ತಿಂಗಳಲ್ಲಿ ಭದ್ರಾವತಿ ತಾಲ್ಲೂಕಿನ ದಿಗ್ಗೇನಹಳ್ಳಿಯಲ್ಲಿ ಅಕ್ವಡಕ್ ಒಡೆದು ಅಪಾರ ಪ್ರಮಾಣದ – ನೀರು ಪೋಲಾಗಿತ್ತು. ತಿಂಗಳ ನಂತರ ಅದನ್ನು ಸರಿಪಡಿಸಲಾಗಿತ್ತು. ಆಗ ಕೊನೆ ಭಾಗದ ಜಮೀನುಗಳಿಗೆ ಸರಿಯಾದ ಸಮಯದಲ್ಲಿ ನೀರು ಸಿಗದೆ ಭತ್ತದ ಇಳುವರಿ ಕುಂಠಿತಗೊಂಡಿತ್ತು. ಇದರಿಂದ ಕೃಷಿಕರಿಗೆ ನಷ್ಟ ಉಂಟಾಗಿತ್ತು. ಈಗಲೂ ಅದೇ ಪರಿಸ್ಥಿತಿ ನಿರ್ಮಾಣ ಆಗಿದೆ ಎನ್ನುತ್ತಾರೆ ಭಾರತೀಯ ಕಿಸಾನ್ ಸಂಘದ ತಾಲ್ಲೂಕು ಘಟಕದ ಅಧ್ಯಕ್ಷ ಕೆ.ಸಿ. ತಿಪ್ಪೇಶ್.

*50 ವರ್ಷಗಳಷ್ಟು ಹಳೆಯದಾದ ಈ ನಾಲೆಯನ್ನು ಬೇಸಿಗೆ ಕಾಲದಲ್ಲಿ ದುರಸ್ತಿ ಮಾಡಿದ್ದರೆ ರೈತರಿಗೆ ನಷ್ಟ ಉಂಟಾಗುತ್ತಿರಲಿಲ್ಲ. ಕ್ಯಾಸಿನಕೆರೆ, ಕುಳಗಟ್ಟೆ, ಹನುಮನಹಳ್ಳಿ, ಸಾಸ್ವೆಹಳ್ಳಿ,

ಸಾಸ್ವೆಹಳ್ಳಿ ಸಮೀಪದ ಕ್ಯಾಸಿನಕೆರೆ ಪಶು ವೈದ್ಯಕೀಯ ಆಸ್ಪತ್ರೆ ಹಿಂಭಾಗ ಭದ್ರಾ



ನಾಲೆಯ ಅಕ್ವಡಕ್ ಒಡೆದು ನೀರು ಹಳ್ಳದಲ್ಲಿ ಹರಿಯುತ್ತಿರುವುದು

ಹಿರೇಬಾಸೂರು, ಬೆನಕನಹಳ್ಳಿ, ಕಮ್ಮಾರಗಟ್ಟೆ ಸೇರಿ ಹಲವು ಗ್ರಾಮಗಳ ರೈತರು ಈಗ ತಾನೇ ಭತ್ತ ನಾಟಿ ಮಾಡಿದ್ದಾರೆ. ನಾಲೆ ನೀರು ಸರಿಯಾಗಿ ಸಿಗದಿದ್ದರೆ ಎಳೆಯ ಸಸಿಗಳು ಒಣಗುತ್ತವೆ. ಆಗ ರೈತರ ಜೀವನ ಕಷ್ಟವಾಗುತ್ತ–ದೆ' ಎಂದು ಕೃಷಿಕ ಮಲ್ಲೇಶಚಾರ್ ನೋವಿನಿಂದ ನುಡಿದರು.

'ಶಾಸಕರು ಲಕ್ಷಾಂತರ ರೂಪಾಯಿ ಅನುದಾನ ನೀಡಿ ನಾಲೆಯ ಹೂಳು ತೆಗಿಸಿದರು. ಈ ಸಂದರ್ಭದಲ್ಲಿ ಅಧಿಕಾರಿಗಳು ಇತ್ತ ಗಮನ ಹರಿಸಿದ್ದರೆ ದುರಸ್ತಿಯಾಗಿ ರೈತರಿಗೆ ನೀರು ಸಿಗುತ್ತಿತ್ತು. ಅಧಿಕಾರಿಗಳು ಸಾರ್ವಜನಿಕರ ಹಣವನ್ನು ಅನಗತ್ಯ ಕೆಲಸಗಳಿಗೆ ಬಳಸುತ್ತಿರುವುದು ಬೇಸರದ ಸಂಗತಿ' ಎಂದು ಕ್ಯಾಸಿನಕೆರೆ ರೈತಪರಮೇಶ್ವರಪ್ಪ ದೂರಿದರು.

ಮಾಹಿತಿ ತಿಳಿದ ತಕ್ಷಣ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ, ನೀರು ಪೋಲಾಗುವುದನ್ನು ತಡೆದಿದ್ದಾರೆ. ಅದಷ್ಟು ಬೇಗ ಸಮಸ್ಯೆ ಪರಿಹರಿಸುವು–ದಾಗಿ ತಿಳಿಸಿದ್ದಾರೆ

# ಡಾ.ವಿಷ್ಣುವರ್ಧನ್ ನಟನೆಯ ಚಿತ್ರಗೀತೆಗಳ ಗಾಯನ ನಾಳೆ



**ಚಿಕ್ಕಮಗಳೂರು:** ಕರ್ನಾಟಕ ರತ್ನ ಪ್ರಶಸ್ತಿಗೆ ಮರಣೋತ್ತರವಾಗಿ ಪಾತ್ರರಾದ ಖ್ಯಾತ ನಟ ಡಾ.ವಿಷ್ಣುವರ್ಧನ್ ಅವರ 75ನೇ ಹುಟ್ಟುಹಬ್ಬದ ಅಂಗವಾಗಿ 'ನನ್ನ ಹಾಡು ನನ್ನದು' ಶೀರ್ಷಿಕೆಯಡಿ ಸಾಹಸಸಿಂಹ ನಟನೆಯ ಕನ್ನಡ ಚಿತ್ರಗೀತೆಗಳ ಗಾಯನ ಕಾರ್ಯಕ್ರಮ ಸೆಪ್ಟಂಬರ್ 14 ರಂದು ಸಂಜೆ 6 ಗಂಟೆಗೆ ನಗರದ ಎಂ.ಇ.ಎಸ್. ಕಾಲೇಜಿನ ಆವರಣದಲ್ಲಿ ನಡೆಯಲಿದೆ.

ಪೂರ್ವಿ ಸುಗಮ ಸಂಗೀತ ಅಕಾಡೆಮಿ ಟ್ರಸ್ಟ್, ಯುರೇಕಾ ಅಕಾಡೆಮಿ ಹಾಗೂ ಲಯನ್ಸ್ ಸಂಸ್ಥೆಯ ಸಂಯುಕ್ತ ಆಶ್ರಯದಲ್ಲಿ ನಡೆಯುವ ಈ ಕಾರ್ಯಕ್ರಮವನ್ನು ಎ.ಐ.ಟಿ. ಕಾಲೇಜಿನ ಪ್ರಾಂಶುಪಾಲ ಡಾ.ಸಿ.ಟಿ.ಜಯದೇವ ಅವರು ಉದ್ಘಾಟಿಸಲಿದ್ದಾರೆ. ಯುರೇಕಾ ಅಕಾಡೆಮಿಯ ಸಂಸ್ಥಾಪಕ ದೀಪಕ್ ದೊಡ್ಡಯ್ಯ ಅಧ್ಯಕ್ಷತೆ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ಲಯನ್ಸ್ ಸಂಸ್ಥೆ ಅಧ್ಯಕ್ಷ ಸಿ.ಎನ್.ಕುಮಾರ್, ಕಲಾಪೋಷಕ ಹಾಗೂ ಕಾಫಿ ಬೆಳೆಗಾರ ಟಿ.ಎಸ್.ರವಿಶಂಕರ್ ಭಾಗವಹಿಸಲಿದ್ದಾರೆ.

ಪೂರ್ವಿ ಗಾನಯಾನ 111ರ ಸರಣಿಯ ಈ ಗಾಯನ ಕಾರ್ಯಕ್ರಮದಲ್ಲಿ ಪೂರ್ವಿ ತಂಡದ ಮುಖ್ಯಸ್ಥ ಎಂ.ಎಸ್.ಸುಧೀರ್ ನೇತೃತ್ವದಲ್ಲಿ ಗಾಯಕರಾದ ಚೇತನರಾಮ್, ಶ್ರೀಕಾಂತ್, ಅನುಷ, ಚೈತನ್ಯ, ಪೃಥ್ವಿಶ್ರೀ, ಮೇಘ, ಅದ್ವಿತ್ ದೇಶ್ ಅವರುಗಳು ಡಾ.ವಿಷ್ಣು ಅಭಿನಯದ ಗೀತೆಗಳಿಗೆ ಧ್ವನಿಯಾಗಲಿದ್ದಾರೆ.

# ತರಗತಿಗಳಿಗೆ ಅತಿಕ್ರಮ ಪ್ರವೇಶ; ಆಧಾರ ರಹಿತ ಆರೋಪ: ಕ್ರಮಕ್ಕೆ ಆಗ್ರಹ

**ಹೊನ್ನಾಳಿ:** 'ಅವಳಿ ತಾಲ್ಲೂಕಿನ ಸರ್ಕಾರಿ ಶಾಲೆಗಳ ತರಗತಿಗಳಿಗೆ ಅತಿಕ್ರಮ ಪ್ರವೇಶ ಮಾಡುವುದು, ಮುಖ್ಯಶಿಕ್ಷಕರ ಅಧಿಕಾರ ವ್ಯಾಪ್ತಿಯಲ್ಲಿ ಹಸ್ತಕ್ಷೇಪ ಮಾಡುವುದು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗೆ ಆಧಾರ ರಹಿತ ದೂರು ನೀಡುತ್ತಿರುವ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ ಸಮನ್ವಯ ವೇದಿಕೆಯ ಅಧ್ಯಕ್ಷ ಎ.ಎಸ್. ಶಿವಲಿಂಗಪ್ಪ ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು' ಎಂದು ಸರ್ಕಾರಿ ನೌಕರರ ಸಂಘದ ತಾಲ್ಲೂಕು ಘಟಕದ ಅಧ್ಯಕ್ಷ ಕೆ. ಅರುಣ್‌ಕುಮಾರ್ ಹೇಳಿದರು.

ಗುರುವಾರ ಕ್ಷೇತ್ರ ಶಿಕ್ಷಣಾಧಿಕಾರಿಗೆ ಹಾಗೂ ತಹಶೀಲ್ದಾರ್‌ಗೆ ಮನವಿ ಸಲ್ಲಿಸಿ ಮಾತನಾಡಿದರು.

'ಹೊನ್ನಾಳಿ ಮತ್ತು ನ್ಯಾಮತಿ ತಾಲ್ಲೂಕು ಪ್ರಾಥಮಿಕ ಹಾಗೂ ಪ್ರೌಢ ಶಾಲಾ ಶಿಕ್ಷಕರು ಪ್ರತಿದಿನ ಬೆಳಿಗ್ಗೆ 9.30ಕ್ಕೆ ಬಂದು ಬಯೋಮೆಟ್ರಿಕ್ ಕೊಟ್ಟು ವೈಯಕ್ತಿಕ ಕೆಲಸ ಕಾರ್ಯಗಳಿಗೆ

ಹೋಗುತ್ತಾರೆ ಹಾಗೂ ಸಂಜೆ ಬಂದು ಬಯೋಮೆಟ್ರಿಕ್ ಕೊಟ್ಟು ಹಾಜರಾತಿ : ತೋರಿಸುತ್ತಾರೆ ಎಂದು ಶಿವಲಿಂಗಪ್ಪ ದೂರಿದ್ದಾರೆ. ಹೀಗೆ ದೂರಲು ಯಾವುದಾದರೂ ಆಧಾರ ಅಥವಾ ಸಾಕ್ಷಿಗಳಿವೆಯೇ' ಎಂದು ಪ್ರಶ್ನಿಸಿದರು.

'ಒಂದು ವೇಳೆ ಯಾರಾದರೂ ಹೀಗೆ ಮಾಡಿದ್ದರೆ ಅಂತಹ ಶಿಕ್ಷಕರ ಮೇಲೆ ವೈಯಕ್ತಿಕವಾಗಿ ದೂರು ನೀಡಲಿ, ಅದನ್ನು ಬಿಟ್ಟು ಇಡೀ ಶಿಕ್ಷಕ ಸಮೂಹವನ್ನು ದೂರುವುದು ಎಷ್ಟು ಸರಿ' ಎಂದು ಕೇಳಿದರು.

ತಾಲ್ಲೂಕು ಎನ್‌ಪಿಎಸ್ ನೌಕರರ ಸಂಘದ ಅಧ್ಯಕ್ಷ ಪ್ರಕಾಶ್‌ನಾಯ್ಕ, ಚಂದ್ರಶೇಖರ್, ಸಿದ್ದೇಶಪ್ಪ, ಕೃಷ್ಣನಾಯ್ಕ, ನಾಗರಾಜನಾಯ್ಕ, ಪ್ರಕಾಶ್‌ನಾಯ್ಕ, ಶೇಖರಪ್ಪ ಭಾಗಿಯಾಗಿದ್ದರು

# 27 ಜನರಿಗೆ ಕಚ್ಚಿದ ಹುಚ್ಚುನಾಯಿ

**ಹೊನ್ನಾಳಿ:** ತಾಲ್ಲೂಕಿನಲ್ಲಿ ಹುಚ್ಚುನಾಯಿ ಮೂರು ದಿನಗಳಲ್ಲಿ 27 ಜನರಿಗೆ ಕಚ್ಚಿ ಗಾಯಗೊಳಿಸಿದೆ.

ಸೆ. 8ರಂದು ರಾತ್ರಿ ಅವಧಿಯಲ್ಲಿ 19 ಜನರಿಗೆ ಕಡಿದಿತ್ತು ತಕ್ಷಣವೇ ಸರ್ಕಾರಿ ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆದುಕೊಂಡಿದ್ದಾರೆ. ಸೆ. 9 ರ ಮಂಗಳವಾರ ಸಂಜೆ ಕೂಡಾ ಇದೇ

ನಾಯಿ ಅಂದಾಜು 8 ಜನರಿಗೆ ಕಚ್ಚಿದೆ. ಹುಚ್ಚುನಾಯಿ ಕಡಿತಕ್ಕೊಳಗಾದ 27 ಜನರಿಗೂ ಅಗತ್ಯ ಚುಚ್ಚುಮದ್ದು, ನೀಡಲಾಗಿದೆ ಎಂದು ತಾಲ್ಲೂಕು ಆಸ್ಪತ್ರೆ ವೈದ್ಯಾಧಿಕಾರಿ ಚಂದ್ರಪ್ಪ ತಿಳಿಸಿದ್ದಾರೆ.

ಪುರಸಭೆ ಮುಖ್ಯಾಧಿಕಾರಿ ಟ್ರೈ.ಲೀಲಾವತಿ ಅವರು ನಾಯಿ ಸೆರೆ – ಹಿಡಿಯುವಂತೆ ಸಿಬ್ಬಂದಿಗೆ ಸೂಚಿಸಿದ್ದಾರೆ. ಸಿಬ್ಬಂದಿ ಹುಡುಕಾಟ ನಡೆಸಿದರೂ ಈ ".ನಾಯಿಯು ಎಲ್ಲಿಯೂ ಕಂಡು



ಬಂದಿಲ್ಲ ಇನ್ನೊಂದು ನಾಯಿ ನಾಗರಿಕರ ಮೇಲೆ ಈ ದಾಳಿ ನಡೆಸಿದ ಮಾಹಿತಿಸಿಕ್ಕಿದ್ದು, ಅದನ್ನು – ಸೆರೆಹಿಡಿದಿದ್ದಾರೆ.

## ಕಟ್ಟಡದ ಎತ್ತರವನ್ನು 21ರಿಂದ 15 ಮೀಟರ್‌ಗೆ ಪರಿಷ್ಕರಿಸಿದ ರಾಜ್ಯ ಸರ್ಕಾರ

# 4 ಅಂತಸ್ತು ಕಟ್ಟಡಕ್ಕೆ ಫೈರ್ ಎನ್‌ಒಸಿ ಕಡ್ಡಾಯ

## ರೂ 734 ಕೋಟಿ ಮೌಲ್ಯದ ಆಸ್ತಿ ನಷ್ಟ

**ಅಗ್ನಿಶಾಮಕ ಇಲಾಖೆಗೆ 2022–23ರಲ್ಲಿ 2.87 ಲಕ್ಷ ಕರೆಗಳು ಬಂದಿದ್ದು, 404.44 ಕೋಟಿ ರೂ. ಅಸ್ತಿ ನಷ್ಟವಾಗಿದೆ. ಆ ಪೈಕಿ 76 ಮಂದಿ ಮೃತಪಟ್ಟಿದ್ದರೆ, 123 ಮಂದಿ ರಕ್ಷಣೆ ಮಾಡಲಾಗಿದೆ. 221 ಜನರು ರಕ್ಷಣೆ ಮಾಡಲಾಗಿದೆ 201 ಮಂದಿ ಗಾಯಗೊಂಡಿದ್ದಾರೆ ತುರ್ತು ವಾಹನಗಳೂ ಸ್ಥಳಕ್ಕೆ ದೌಡಹಿಸುವಷ್ಟರಲ್ಲಿ 2023–24 ನೇ ಸಾಲಿನಲ್ಲಿ 1344 ಜನರು ಪ್ರಾಣ ಕಳಿದುಕೊಂಡರು 2024–25 1522 ಮಂದಿ ಮೃತಪಟ್ಟಿದ್ದಾರೆ 2.38 ಲಕ್ಷ ಕರೆಗಳು ಬಂದಿದ್ದು, 330.26 ಕೋಟಿರೂ. ಆಸ್ತಿ ನಷ್ಟವಾಗಿದೆ. 48 ಮಂದಿ ಮೃತಪಟ್ಟಿದ್ದಾರೆ. 121 ಜನರ ರಕ್ಷಣೆ ಮಾಡಲಾಗಿದೆ. 201 ಮಂದಿ ಗಾಯಗೊಂಡಿದ್ದಾರೆ. ತುರ್ತು ವಾಹನಗಳು ಸ್ಥಳಕ್ಕೆ ದೌಡಾಯಿಸುವಷ್ಟರಲ್ಲಿ 2023–24 0 1,344 ಣಚಿಭಿಟಿರಿಜ 2024–25ನೇ ಸಾಲಿನಲ್ಲಿ 1,252 ಮಂದಿ ಮೃತಪಟ್ಟಿದ್ದಾರೆ. ಒಟ್ಟು ಎರಡು ವರ್ಷದಲ್ಲಿ ರಾಜ್ಯದ ವಿವಿಧ ಜಿಲ್ಲೆಯಲ್ಲಿ ಸಾವಿನ ಸಂಖ್ಯೆ ಎರಡೂವರೆ ಸಾವಿರ ದಾಟಿದ್ದು, 734 ಕೋಟಿ ರೂ. ಮೌಲ್ಯದ ಆಸ್ತಿ ನಷ್ಟವಾಗಿದೆ.**

**ಬೆಂಗಳೂರು:** ರಾಜ್ಯದಲ್ಲಿ ಕಟ್ಟಡ ಅಗ್ನಿ ಅವಘಡ ಪ್ರಕರಣ ಹೆಚ್ಚುತ್ತಿರುವುದನ್ನು ಗಂಭೀರವಾಗಿ ಪರಿಗಣಿಸಿರುವ ಸರ್ಕಾರ ನಿರಾಕ್ಷೇಪಣಾ ಪತ್ರ (ಎನ್ ಒಸಿ) ನಿಯಮ ಪರಿಷ್ಕರಿಸಿದೆ. ಅಗ್ನಿ ಶಾಮಕ, ತುರ್ತು ಸೇವೆಗಳ ಇಲಾಖೆ ನಿಯಮದಂತೆ 21 ಮೀಟರ್ ಎತ್ತರದ ಕಟ್ಟಡಗಳಿಗೆ ಎನ್‌ಒಸಿ ಕಡ್ಡಾಯವಾಗಿತ್ತು. ಇನ್ನುಂದೆ 15 ಮೀಟರ್ ಎತ್ತರದ ಕಟ್ಟಡಗಳಿಗೂ (ಅಂದಾಜು 4 ಅಂತಸ್ತು) ಎನ್‌ಒಸಿ ಕಡ್ಡಾಯವಾಗಿದೆ. ಶೈಕ್ಷಣಿಕ ಕಟ್ಟಡ, ಆಸ್ಪತ್ರೆ, ವಸತಿ, ವಾಣಿಜ್ಯ, ಕೈಗಾರಿಕೆ, ಗೋದಾಮಿನ ಉಪಯೋಗಕ್ಕಾಗಿ ಬಹುಮಹಡಿಯ 15 ಮೀಟರ್ ಎತ್ತರದ ಕಟ್ಟಡಗಳಿಗೆ ಕಡ್ಡಾಯವಾಗಿ ನಿರಾಕ್ಷೇಪಣಾ ಪತ್ರ ಪಡೆಯುವ ನಿಯಮ ಅನ್ವಯವಾಗಲಿದೆ.

**ಪರಿಶೀಲನಾ ವರದಿ ಸಲ್ಲಿಕೆ:** ಜಿಲ್ಲಾ ಮಟ್ಟದಲ್ಲಿ ಅಗ್ನಿಶಾಮಕ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿನ ಬಹುಮಹಡಿ ಕಟ್ಟಡ ಪರಿಶೀಲಿಸಿ ನಿಗದಿತ ನಮೂನೆಯಲ್ಲಿ ಸಂಬಂಧಪಟ್ಟ ಪ್ರಾದೇಶಿಕ ಅಗ್ನಿಶಾಮಕ ಅಧಿಕಾರಿಗಳಿಗೆ ವರದಿ ಸಲ್ಲಿಸುವಂತೆ ಸೂಚಿಸಲಾಗಿದೆ. ಪ್ರಾದೇಶಿಕ ಆಯುಕ್ತರು ಸಲ್ಲಿಸುವ ನಿರಾಕ್ಷೇಪಣಾ ವರದಿ ಪರಿಶೀಲಿಸಿ ಸಂಬಂಧಪಟ್ಟ




ಕಟ್ಟಡ ಮಾಲೀಕರಿಗೆ ನಿಗದಿತ ಶುಲ್ಕವನ್ನು ಸರ್ಕಾರಕ್ಕೆ

## 2 ವರ್ಷ 2,596 ಸಾವು

**ರಾಜ್ಯದಲ್ಲಿ ಅಗ್ನಿ ದುರಂತದಿಂದ ಕಳೆದ ಎರಡು ವರ್ಷದಲ್ಲಿ 2,595 ಜನರು ಮೃತಪಟ್ಟಿದ್ದಾರೆ. ವಾಣಿಜ್ಯ ಕಟ್ಟಡ, ಮನೆ, ಕಾರ್ಖಾನೆ, ಗೋದಾಮು ಸೇರಿದಂತೆ ವಿವಿಧ ಕಡೆ ಸಂಭವಿಸುತ್ತಿರುವ ದುರ್ಘಟನೆಯಿಂದ ಪ್ರತಿ ವರ್ಷ 1,200 ರಿಂದ 1,300 ಜನರು ಮೃತಪಡುತ್ತಿದ್ದಾರೆ.**

ಪಾವತಿಸಲು ಕ್ರಮ ಕೈಗೊಳ್ಳುವಂತೆ ಆದೇಶದಲ್ಲಿ ತಿಳಿಸಲಾಗಿದೆ. ರಾಷ್ಟ್ರೀಯ ಕಟ್ಟಡ ಸಂಹಿತೆ 2016 ಆದೇಶನ್ವಯ 21 ಮೀಟರ್ ನಲ್ಲಿ ಅಂದಾಜು 5 ಅಂತಸ್ತಿನ ಕಟ್ಟಡ ನಿರ್ಮಾಣಕ್ಕೆ ಅಗ್ನಿಶಾಮಕ ಇಲಾಖೆಯಿಂದ ಎನ್‌ಒಸಿ ಪಡೆಯಲಾಗುತ್ತಿತ್ತು. ಆದರೆ, ಆದರೆ 15 ಮೀಟರ್ ಕಡ್ಡಾಯಗೊಳಿಸಿರುವುದರಿಂದ 4 ಅಂತಸ್ತಿನ ಕಟ್ಟಡಗಳಿಗೆ ನಿರಾಕ್ಷೇಪಣಾ ಪತ್ರ ಪಡೆಯಬೇಕು.

## ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆ' ಅಂಗವಾಗಿ ಜಾಗೃತಿ ಜಾಥ

# ಮಾನಸಿಕ ಉದ್ವೇಗಳಿಗೆ ಒಳಗಾಗದಿರಿ

**ಬಳ್ಳಾರಿ:** ವ್ಯಕ್ತಿಯು ಜೀವನದಲ್ಲಿ ಬರುವ ಮಾನಸಿಕ, ಆರ್ಥಿಕ, ಪ್ರೀತಿಯ ಆಲೋಚನೆಗಳಿಂದ ಒತ್ತಡ ಹಾಗೂ ಉದ್ವೇಗಗಳಿಂದ ಮಾನಸಿಕ ಖಿನ್ನತೆಗೆ ಒಳಗಾಗಬಾರದು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್. ಹೊಸಮನೆ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಆಸ್ಪತ್ರೆ, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಜಿಲ್ಲಾ ಮಾನಸಿಕ ಆರೋಗ್ಯ ವಿಭಾಗ ಇವರ ಸಂಯುಕ್ತಾಶ್ರಯದಲ್ಲಿ ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆ ಅಂಗವಾಗಿ ನಗರದ ಜಿಲ್ಲಾ ಆಸ್ಪತ್ರೆಯ ಆವರಣದಲ್ಲಿ ಶುಕ್ರವಾರ ಏರ್ಪಡಿಸಿದ್ದ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಆತ್ಮಹತ್ಯೆಯನ್ನು ತಡೆಗಟ್ಟಲು 2003 ರಿಂದ ವಿಶ್ವ ಆತ್ಮಹತ್ಯೆ ದಿನವನ್ನು ಆಚರಿಸಲು ಪ್ರಾರಂಭಿಸಲಾಯಿತು. ಭಾರತದಲ್ಲಿ ವರ್ಷಕ್ಕೆ 1ಲಕ್ಷ 73 ಸಾವಿರ ಜನರು ಸಾವಿಗೀಡಾಗುತ್ತಿದ್ದು, ಪ್ರತಿ 11 ಸೆಕೆಂಡ್‌ಗಳಿಗೆ ಒಂದು ಸಾವು ಸಂಭವಿಸುತ್ತಿದೆ. ಇದಕ್ಕೆ ವ್ಯಕ್ತಿಯಲ್ಲಿ ಬರುವ ತೀವ್ರ ತರವಾದ ಆಲೋಚನೆಗಳು ಪ್ರಮುಖ



ಕಾರಣವಾಗಿದೆ. ಅಂತವರನ್ನು ಗುರ್ತಿಸಿ ಆಪ್ತ ಸಮಾಲೋಚನೆ ಮೂಲಕ ಚಿಕಿತ್ಸೆ ನೀಡಿದರೆ ಗುಣಮುಖರಾಗುತ್ತಾರೆ ಎಂದು ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಮನೆಯಲ್ಲಿ ಕುಟುಂಬ ಸದಸ್ಯರ ಜೊತೆಗೂಡಿ ಸಮಸ್ಯೆಗಳ ಕುರಿತು ಮಾತನಾಡಿ ಪರಿಹರಿಸಿಕೊಳ್ಳಬೇಕು. ಶಾಲಾ–ಕಾಲೇಜುಗಳಲ್ಲಿ ಆತ್ಮಹತ್ಯೆ ಬಗ್ಗೆ ಶಿಕ್ಷಕರು ವಿದ್ಯಾರ್ಥಿಗಳಿಗೆ ಅರಿವು ಮೂಡಿಸಬೇಕು ಎಂದು ಹೇಳಿದರು.

ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸರೆಡ್ಡಿ ಅವರು ಮಾತನಾಡಿ, ವಯಸ್ಕರರಲ್ಲಿ ಆತ್ಮಹತ್ಯೆ ಪ್ರಕರಣಗಳು ಹೆಚ್ಚು ಕಂಡುಬರುತ್ತಿವೆ. ಕಷ್ಟಗಳು ಬಂದರೆ ಅವುಗಳನ್ನು ಕುಟುಂಬ ಸದಸ್ಯರಿಗೆ ತಿಳಿಸಬೇಕು. ಪ್ರಸ್ತುತ ಮೊಬೈಲ್ ಯುಗದಲ್ಲಿ ಯಾರು ತಮ್ಮ ಸಮಸ್ಯೆಗಳನ್ನು ಹಂಚಿಕೊಳ್ಳುತ್ತಿಲ್ಲ ಎಂದು ಕಳವಳ ವ್ಯಕ್ತಪಡಿಸಿದ ಅವರು, ತಪ್ಪು ಮಾಡುವುದು ಸಹಜ, ತಿದ್ದಿಕೊಂಡು ಒಂದು ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದರು.

ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅಧಿಕಾರಿ ಹಾಗೂ ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ವೀರೇಂದ್ರ ಕುಮಾರ್ ಅವರು ಮಾತನಾಡಿ, ಸಾರ್ವಜನಿಕ ಆಸ್ಪತ್ರೆಗಳಲ್ಲಿ ಮನೋ ಚೈತನ್ಯ ಕಾರ್ಯಕ್ರಮ ಹಮ್ಮಿಕೊಂಡು ಮಾನಸಿಕ ರೋಗಿಗಳಿಗೆ, ಸಣ್ಣ ಪುಟ್ಟ ಮಾನಸಿಕ ತೊಂದರೆ ಇರುವ ಮನೋ ರೋಗಿಗಳಿಗೆ ಅಪ್ತ ಸಮಾಲೋಚನೆ ಹಾಗೂ ಉಚಿತ ಚಿಕಿತ್ಸೆಯನ್ನು ನೀಡಲಾಗುತ್ತದೆ. ಪ್ರತಿಯೊಬ್ಬರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಜಿಲ್ಲಾ ಮನೋರೋಗತಜ್ಞ ಡಾ.ನಂದ ಕಿಶೋರ್‌ರೆಡ್ಡಿ ಅವರು ಮಾತನಾಡಿ, ವ್ಯಕ್ತಿಯಲ್ಲಿ ಬರುವ ತೀವ್ರ ತರವಾದ ಕೋಪ, ಉದ್ವೇಗಗಳಿಂದ, ಒತ್ತಡ, ಆಲೋಚನೆಗಳಿಂದ ಅದರಲ್ಲೂ ಸಾಮಾನ್ಯವಾಗಿ 15–30 ವಯಸ್ಸಿನ ವ್ಯಕ್ತಿಗಳಲ್ಲಿ ಆತ್ಮಹತ್ಯೆ ಹೆಚ್ಚು ಕಂಡುಬರುತ್ತಿದ್ದು, ಜೀವನ ಶೈಲಿಯಲ್ಲಿ ಬದಲಾವಣೆ ಆಗಬೇಕು. ಮಾನಸಿಕ ಆರೋಗ್ಯ ಸಮಸ್ಯೆಗಳಿಗೆ (ಟೆಲಿ ಮಾನಸ್) ಎಂಬ ಉಚಿತ ಸಹಾಯವಾಣಿ 14416 ಸಂಖ್ಯೆಗೆ ಗೆ ಕರೆ ಮಾಡಿ ಸೂಕ್ತ ಮಾರ್ಗದರ್ಶನ ಹಾಗೂ ಆಪ್ತ ಸಮಾಲೋಚನೆಯನ್ನು ಪಡೆದು ಮಾನಸಿಕ ಸಮಸ್ಯೆಗಳಿಂದ ಮುಕ್ತಿ ಹೊಂದಬಹುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ.ಇಂದ್ರಾಣಿ, ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಷಿದ್ ಬೇಗಂ, ಜಿಲ್ಲಾ ಆಸ್ಪತ್ರೆ ಸಿಬ್ಬಂದಿ, ಜಿಲ್ಲಾ ಪೊಲೀಸ್ ಸಿಬ್ಬಂದಿ ಸೇರಿದಂತೆ ಆಶಾ ಕಾರ್ಯಕರ್ತರು, ಇತರರು ಭಾಗವಹಿಸಿದ್ದರು.

ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ಜಾಗೃತಿ ಜಾಥಾವು ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆವರಣದಿಂದ ಆರಂಭವಾಗಿ ನೂತನ ಜಿಲ್ಲಾಡಳಿತ ಆವರಣಕ್ಕೆ ತಲುಪಿ ಪುನಃ ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆವರಣಕ್ಕೆ ತಲುಪಿ ಮುಕ್ತಾಯಗೊಂಡಿತು.

# ಹಿಮೋಫಿಲಿಯಾ ಪೀಡಿತ ಮಕ್ಕಳಿಗೆ ಡ್ರೈ ಫ್ರೂಟ್ಸ್ ಹಾಗೂ ಬೆಡ್ ಸೀಟ್ ವಿತರಣೆ



**ಶಿವಮೊಗ್ಗ :** ಮೆಗ್ಗಾನ್ ಆಸ್ಪತ್ರೆಯ 150 ಹಿಮೋಫಿಲಿಯಾ ಪೀಡಿತ ಮಕ್ಕಳಿಗೆ " ಶ್ರೀ ಶ್ರೀ ಶ್ರೀ ನಾರಾಯಣಗುರು ಸೇವಾ ಸಮಿತಿ (ನೋ)" ವತಿಯಿಂದ ಡ್ರೈ ಫ್ರೂಟ್ಸ್ ಹಾಗೂ ಬೆಡ್ ಸೀಟ್ ಅನ್ನು ವಿತರಿಸಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ನಿವೃತ್ತ ಮಿಲ್ಟ್ರೀ ರವೀಂದ್ರನ್ ಉದ್ಘಾಟಿಸಿದರು. ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯರಾದ ಡಿ.ಎಸ್.ಅರುಣ್, ಕಲಗೋಡ್ ರತ್ನಾಕರ್ ಸಮಿತಿಯ ಅಧ್ಯಕ್ಷರು ಮತ್ತು ಸದಸ್ಯರು ಉಪಸ್ಥಿತರಿದ್ದರು

# ದಿ॥ ಸುಬ್ರಮಣ್ಯ ಭಾರತೀಯರ್ ಅವರ 104ನೇ ಪುಣ್ಯತಿಥಿ

**ಶಿವಮೊಗ್ಗ:** ತಮಿಳ್‌ನ ಮಹಾಕವಿ ದಿ॥ ಸುಬ್ರಮಣ್ಯ ಭಾರತೀಯರ್ ಅವರ 104ನೇ ಪುಣ್ಯತಿಥಿ ಅಂಗವಾಗಿ ಇಂದು ಮಲೆನಾಡು ತಮಿಳ್ ಯುವ ಸಂಘಂ(ರಿ) ಕಚೇರಿಯಲ್ಲಿ ಸ್ಮರಣ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಮಹಾಕವಿ ಸುಬ್ರಹ್ಮಣ್ಯ ಭಾರತಿಯಾರ್ (11/12/1882–11/9/1921) ಭಾರತದ ಒಬ್ಬ ಶ್ರೇಷ್ಠ ತಮಿಳು ಕವಿ, ಸ್ವಾತಂತ್ರ್ಯ ಹೋರಾಟಗಾರ, ಮತ್ತು ಸಮಾಜ ಸುಧಾರಕರಾಗಿದ್ದರು. ಆಧುನಿಕ ತಮಿಳು ಶೈಲಿಯಲ್ಲಿ ಸರಳ ಶಬ್ದಗಳನ್ನು ಬಳಸುವ ಮೂಲಕ, ರಾಷ್ಟ್ರೀಯತೆ, ಸ್ತ್ರೀವಾದ, ಮತ್ತು ಸಾಮಾಜಿಕ ನ್ಯಾಯವನ್ನು ಪ್ರೋತ್ಸಾಹಿಸಿದರು. ಅವರು 'ಮಹಾಕವಿ' ಎಂದು ಪ್ರಶಂಸಿಸಲ್ಪಟ್ಟಿದ್ದಾರೆ.

ಇವರು ನಮ್ಮನು ಆಗಲಿ ಬಹಳ ವರ್ಷಗಳೇ ಕಳೆದರೂ ಅವರ ಕೃತಿಗಳಿಂದ ಇಂದಿಗೂ ಅನೇಕರಿಗೆ ಸ್ಫೂರ್ತಿಯಾಗಿದ್ದಾರೆ.

ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷ ಸಂದೀಪ್ ಎಸ್.ಆರ್., ಉಪಾಧ್ಯಕ್ಷ ಶಶಿಕುಮಾರ್ ಆರ್., ಪ್ರದಾನ ಕಾರ್ಯದರ್ಶಿ ರಮೇಶ್. ಸಿ., ಸಂಘಟನಾ ಕಾರ್ಯದರ್ಶಿ ಕುಮರೇಶ್ .ಎ, ಖಜಾಂಚಿ ಶಬರಿಶ್ ಎಸ್, ಸಹಾ ಕಾರ್ಯದರ್ಶಿಗಳು, ಸದಸ್ಯರುಗಳು ಉಪಸ್ಥಿತರಿದ್ದರು.

# ಸೆ.17ರಂದು ಶ್ರೀ ವಿಶ್ವಕರ್ಮ ಜಯಂತಿ ಆಚರಣೆ

**ಚಿಕ್ಕಮಗಳೂರು, ಸೆ.12:** ಜಿಲ್ಲಾಡಳಿತದ ವತಿಯಿಂದ ಸೆಪ್ಟಂಬರ್ 17 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಕುವೆಂಪು ಕಲಾಮಂದಿರದಲ್ಲಿ ಶ್ರೀ ವಿಶ್ವಕರ್ಮ ಜಯಂತಿ ಆಚರಣೆ ನಡೆಯಲಿದೆ.

ಮಾನ್ಯ ಇಂಧನ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಕೆ.ಜೆ.ಜಾರ್ಜ್ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ವಿಧಾನ ಪರಿಷತ್ ಮಾನ್ಯ ಉಪ ಸಭಾಪತಿ ಶ್ರೀ ಎಂ.ಕೆ.ಪ್ರಾಣೇಶ್, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶಾಸಕರಾದ ಟಿ.ಡಿ.ರಾಜೇಗೌಡ, ಅನಿವಾಸಿ ಭಾರತೀಯ ಕೋಶದ ಉಪಾಧ್ಯಕ್ಷರಾದ ಡಾ.ಆರತಿ ಕೃಷ್ಣ, ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಎಂ.ಶ್ರೀನಿವಾಸ್ ಭಾಗವಹಿಸಲಿದ್ದಾರೆ.

ಚಿಕ್ಕಮಗಳೂರು ಕ್ಷೇತ್ರದ ಶಾಸಕರಾದ ಹೆಚ್.ಡಿ.ತಮ್ಮಯ್ಯ ಅಧ್ಯಕ್ಷತೆ ವಹಿಸಲಿದ್ದು, ಉಡುಪಿ–ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದ ಸಂಸದರಾದ ಕೋಟ ಶ್ರೀನಿವಾಸ ಪೂಜಾರಿ, ರಾಜ್ಯಸಭೆ ಸದಸ್ಯರಾದ ಜೈರಾಮ್ ರಮೇಶ್, ಹಾಸನ ಲೋಕಸಭಾ ಕ್ಷೇತ್ರದ ಸಂಸದರಾದ ಶ್ರೇಯಸ್ ಎಂ.ಪಟೇಲ್, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್.ಭೋಜೇಗೌಡ, ಶಾಸಕರುಗಳಾದ ಜಿ.ಹೆಚ್.ಶ್ರೀನಿವಾಸ್, ಕೆ.ಎಸ್.ಆನಂದ್, ನಯನ ಮೋಟಮ್ಮ, ವಿಧಾನ ಪರಿಷತ್ ಸದಸ್ಯರುಗಳಾದ ಸಿ.ಟಿ.ರವಿ, ಡಾ.ಧನಂಜಯ ಸರ್ಜಿ, ಭದ್ರಾ ಕಾಡಾ ಅಧ್ಯಕ್ಷರಾದ ಡಾ.ಕೆ.ಪಿ.ಅಂಶುಮಂತ್, ಕ.ರಾ.ಕೃಷಿ ಉತ್ಪನ್ನ ಸಂಸ್ಕರಣೆ ಮತ್ತು ರಫ್ತು ನಿಗಮದ ಅಧ್ಯಕ್ಷರಾದ ಬಿ.ಹೆಚ್.ಹರೀಶ್, ನಗರಸಭೆ ಅಧ್ಯಕ್ಷರಾದ ಬಿ.ಶೀಲಾ ದಿನೇಶ್ ಪಾಲ್ಗೊಳ್ಳಲಿದ್ದಾರೆ.

ಹಾಸನ ಎಚ್.ಕೆ.ಎಸ್ ಪದವಿ ಪೂರ್ವ ಕಾಲೇಜಿನ ಕನ್ನಡ ಉಪನ್ಯಾಸಕ ಎಂ.ರಮೇಶ್ ಅವರು ಉಪನ್ಯಾಸ ನೀಡಲಿದ್ದಾರೆ.

# ಲಿಂಗತ್ವ ಅಲ್ಪಸಂಖ್ಯಾತರ ಸಮೀಕ್ಷೆಗೆ ಸಹಕರಿಸಲು ಸಚಿವ ಜಾರ್ಜ್ ಮನವಿ



**ಚಿಕ್ಕಮಗಳೂರು, ಸೆ.12:** ದೇಶದಲ್ಲೇ ಮೊಟ್ಟ ಮೊದಲ ಬಾರಿಗೆ ಕರ್ನಾಟಕ ರಾಜ್ಯದಲ್ಲಿ ಲಿಂಗತ್ವ ಅಲ್ಪಸಂಖ್ಯಾತರ ಸಮೀಕ್ಷೆಯನ್ನು ಸೆಪ್ಟಂಬರ್ 15 ರಿಂದ ಆರಂಭಿಸಲಾಗುತ್ತಿದ್ದು, ಎಲ್ಲ ಲಿಂಗತ್ವ ಅಲ್ಪಸಂಖ್ಯಾತರು ತಮ್ಮ ನಿಖರವಾದ ಮಾಹಿತಿ ನೀಡಿ ಸಹಕರಿಸುವಂತೆ ಮಾನ್ಯ ಇಂಧನ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಕೆ.ಜೆ.ಜಾರ್ಜ್ ಕೋರಿದರು.

ನಗರದ ಜಿಲ್ಲಾ ಪಂಚಾಯಿತಿಯ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಇಂದು ಸಮೀಕ್ಷೆಯ ಬಿತ್ತಿ ಪತ್ರಗಳನ್ನು ಬಿಡುಗಡೆಗೊಳಿಸುವ ಮೂಲಕ ಸಮೀಕ್ಷೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ರಾಜ್ಯದಲ್ಲಿ ಈ ಸಮೀಕ್ಷೆ ಒಟ್ಟು 45 ದಿನಗಳ ಕಾಲ ನಡೆಯಲಿದ್ದು, ಈ ಸಮೀಕ್ಷೆಯಿಂದ ಲಿಂಗತ್ವ ಅಲ್ಪಸಂಖ್ಯಾತರ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಮಾಹಿತಿಯನ್ನು ಸಂಗ್ರಹಿಸುವುದರಿಂದ ಈ ಸಮುದಾಯಕ್ಕೆ ಪುನರ್ವಸತಿ ಕಲ್ಪಿಸಲು ಸಹಾಯಕವಾಗುವುದೆಂದು ಅವರು ತಿಳಿಸಿದರು.

ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶಾಸಕರಾದ ಟಿ.ಡಿ.ರಾಜೇಗೌಡ, ಶಾಸಕರಾದ ಹೆಚ್.ಡಿ.ತಮ್ಮಯ್ಯ, ನಯನ ಮೋಟಮ್ಮ, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್.ಭೋಜೇಗೌಡ, ಸಿ.ಟಿ.ರವಿ, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಾಜೇಂದ್ರಕುಮಾರ್ ಕಠಾರಿಯಾ, ಜಿಲ್ಲಾಧಿಕಾರಿ ಸಿ.ಎನ್.ಮೀನಾ ನಾಗರಾಜ್, ಜಿ.ಪಂ. ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಹೆಚ್.ಎಸ್.ಕೀರ್ತನಾ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಶ್ರೀನಿವಾಸ ವೈ.ಆಲದಾರ್ತಿ, ಇತರ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಲಿಂಗತ್ವ ಅಲ್ಪಸಂಖ್ಯಾತರು ಭಾಗವಹಿಸಿದ್ದರು.

# ಮಾನಸಿಕ ಕಾಯಿಲೆ ಸಮಾಜದಲ್ಲಿ ಪ್ರಭಾವ ಬೀರುತ್ತಿದೆ : ಸಿ.ಟಿ. ರವಿ



**ಚಿಕ್ಕಮಗಳೂರು:** ದೈಹಿಕ ಕಾಯಿಲೆಗಳಿಗಿಂತ ಹೆಚ್ಚಾಗಿ ಇಂದು ಮನಸ್ಸು ಮತ್ತು ಸಮಾಜದ ಮೇಲೆ ಮಾನಸಿಕ ಕಾಯಿಲೆ ಪ್ರಭಾವ ಬೀರುತ್ತಿದೆ ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ತಿಳಿಸಿದರು.

ಅವರು ಇಂದು ನಗರದ ಹನುಮಂತಪ್ಪ ವೃತ್ತದಲ್ಲಿ ಭಾರತೀಯ ಮನೋವೈದ್ಯಕೀಯ ಸಂಘ ಕರ್ನಾಟಕ ಶಾಖೆ, ಚಿಕ್ಕಮಗಳೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಇವರುಗಳ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾಗಿದ್ದ ಮಾನಸಿಕ ಆರೋಗ್ಯ ಅರಿವು ಜಾಥಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಒತ್ತಡದ ಜೀವನ, ಅತಿಯಾದ ನಿರೀಕ್ಷೆ, ಹಂಚಿಕೊಳ್ಳುವಂತಹ ಸ್ನೇಹ ಸಂಬಂಧವನ್ನು ಕಡಿಮೆ ಮಾಡಿಕೊಂಡಿರುವುದೇ ಇದಕ್ಕೆ ಪ್ರಮುಖ ಕಾರಣವಾಗಿದ್ದು, ಸಮಾಜದೊಂದಿಗೆ ಸಂಪರ್ಕ ಅಗದಿದ್ದರೆ ವ್ಯಕ್ತಿಗತವಾಗಿ ಮಾನಸಿಕ ಒತ್ತಡ ರೂಪುಗೊಳ್ಳುತ್ತದೆ ಎಂದು ಹೇಳಿದರು.

ಈಗಿನ ಜೀವನ ಶೈಲಿ ಮಾನಸಿಕ ಒತ್ತಡ–ಕ್ಕೆ ಕಾರಣವಾಗಿದ್ದು, ಇದೊಂದು ದೊಡ್ಡ ಪಿಡುಗಾಗಿ ಪರಿವರ್ತನೆಯಾಗಿದೆ. ಮಾದಕ ದ್ರವ್ಯಗಳು ಇದಕ್ಕೆ ಬೆಂಬಲವಾಗಿ ನಿಂತಿದೆ. ಇದರಿಂದ ಹೊರಬರಲು ಏನು ಮಾಡಬೇಕೆಂಬ ಬಗ್ಗೆ ಅರಿವು ಮೂಡಿಸುವುದೇ ಈ ಜಾಥಾದ ಪ್ರಮುಖ ಉದ್ದೇಶ ಎಂದರು.

ಒತ್ತಡದಿಂದ ಮುಕ್ತವಾಗಲು ಪೂರ್ವಿಕರ ಜ್ಞಾನ ಬಳಸಿಕೊಂಡು ಮಾನಸಿಕತೆಯಿಂದ ಹೊರಬರಬೇಕು. ಇದಕ್ಕಾಗಿ ಪರಿಪೂರ್ಣ ಪ್ರಯತ್ನ ಮಾಡಿದಾಗ ಮಾನಸಿಕತೆಯಿಂದ ಹೊರಬರಲು ಸಾಧ್ಯ ಎಂದು ಹೇಳಿದರು.

ಆಸೆಗಳನ್ನು ತ್ಯಜಿಸುವುದೂ ಸಹ ಆಂತರಿಕ ನೆಮ್ಮದಿಗೆ ಪೂರಕವಾಗಿದೆ, ಪರಿಸರಕ್ಕೆ ಮತ್ತು ಸಮಾಜಕ್ಕೆ ಹಿತಕಾರಿ ಎಂದು ಶ್ರೀಗಳು ಹೇಳಿರುವುದನ್ನು ಸರ್ವರೂ ಕಾರ್ಯರೂಪಕ್ಕೆ ತರುವ ನಿಟ್ಟಿನಲ್ಲಿ ಪ್ರಯತ್ನಿಸಬೇಕಾದ ಅಗತ್ಯ ಇದೆ ಎಂದರು.

ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ವಿ.ಹನುಮಂತಪ್ಪ ಮಾತನಾಡಿ, ಮಾನಸಿಕ ಒತ್ತಡ ಇಂದು ದೇಹದ ಮೇಲೆ ದುಷ್ಪರಿಣಾಮ ಬೀರುತ್ತಿದೆ. ದೈಹಿಕ ಮತ್ತು ಮಾನಸಿಕವಾಗಿ ಸದೃಢವಾಗಿದ್ದಾಗ ಮಾತ್ರ ಆರೋಗ್ಯವಂತರನ್ನಾಗಿ ಕರೆಯುತ್ತೇವೆ ಎಂದು ಹೇಳಿದರು.

ಮಾನಸಿಕ ಆರೋಗ್ಯದಿಂದ ವೇದನೆ ಅನುಭವಿಸುತ್ತಿರುವವರಿಗೆ ಕಾನೂನು ಸೇವಾ ಪ್ರಾಧಿಕಾರದಲ್ಲಿ ಉಚಿತವಾಗಿ ಅರಿವು ಮೂಡಿಸಿ ನೆರವು ನೀಡುವ ಬಹುದೊಡ್ಡ ವ್ಯವಸ್ಥೆಯನ್ನು ರೂಪಿಸಲಾಗಿದೆ ಎಂದು ತಿಳಿಸಿದರು.

ಮಾನಸಿಕತೆ ನಿಯಂತ್ರಣಕ್ಕಾಗಿ ಸಹಾಯವಾಣಿ ಸಂಖ್ಯೆ–14416 ಗೆ ಕರೆಮಾಡಿದರೆ ಮಾನಸಿಕತೆಯಿಂದ ಬಳಲುತ್ತಿರುವವರ ಬಗ್ಗೆ ಮಾಹಿತಿ, ಸೂಕ್ತ ಸಲಹೆ ನೀಡಲಿಕ್ಕೆ ಸಹಾಯವಾಗುತ್ತದೆ ಎಂದರು.

ಈ ಸಂಬಂಧ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕಾನೂನು ಸೇವಾ ಪ್ರಾಧಿಕಾರ ಸಂಯುಕ್ತವಾಗಿ ಉಚಿತ ಆರೋಗ್ಯ ಆರೋಗ್ಯ ತಪಾಸಣೆ ಶಿಬಿರ ನಡೆಸುವ ಮೂಲಕ ಸಮಾಜದಲ್ಲಿ ಜಾಗೃತಿ ಮೂಡಿಸಿ ನಿರಂತರವಾಗಿ ನಡೆಯುತ್ತಿದೆ ಎಂದು ಹೇಳಿದರು.

# ಸರ್ಕಾರಿ ವೈದ್ಯ ಕಾಲೇಜುಗಳಲ್ಲಿ ಎನ್‌ಆರ್‌ಐ ಕೋಟಾ ರದ್ದತಿಗೆ ಆಗ್ರಹ

## ದಾವಣಗೆರೆಯಲ್ಲಿ ಎಐಡಿಎಸ್‌ಓ ನೇತೃತ್ವದಲ್ಲಿ ವಿದ್ಯಾರ್ಥಿಗಳ ಪ್ರತಿಭಟನೆ




**ದಾವಣಗೆರೆ:** ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಶೇ.15 ರಷ್ಟು ಎನ್‌ಆರ್‌ಐ ಕೋಟಾ ರದ್ದುಪಡಿಸುವಂತೆ ಆಗ್ರಹಿಸಿ ಎಐಡಿಎಸ್‌ಓ ನೇತೃತ್ವದಲ್ಲಿ ವಿದ್ಯಾರ್ಥಿಗಳು ದಾವಣಗೆರೆಯಲ್ಲಿ ಪ್ರತಿಭಟನೆ ನಡೆಸಿದರು.

ಈ ವೇಳೆ ಪ್ರತಿಭಟನಾಕಾರರನ್ನು ಉದ್ದೇಶಿಸಿ ಎಐಡಿಎಸ್‌ಓ ಜಿಲ್ಲಾಧ್ಯಕ್ಷೆ ಪೂಜಾ ನಂದಿಹಳ್ಳಿ ಮಾತನಾಡಿ, 2025–26ನೇ ಸಾಲಿನಿಂದ ರಾಜ್ಯದ ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಶೇ.15 ರಷ್ಟು ಎನ್‌ಆರ್‌ಐ ಕೋಟಾ ಆರಂಭಿಸಲು ರಾಜ್ಯ ಸರ್ಕಾರ ನಿರ್ಧರಿಸಿದೆ. ಈ ನಿರ್ಧಾರವು ವೈದ್ಯಕೀಯ ಶಿಕ್ಷಣದ ಕನಸು ಹೊತ್ತ ರಾಜ್ಯದ ಬಡ ವಿದ್ಯಾರ್ಥಿಗಳನ್ನು ಆತಂಕಕ್ಕೆ ತಳ್ಳಿದೆ. ಈಗಾಗಲೇ ಅಖಿಲ ಭಾರತ ಕೋಟಾದಡಿ ಶೇ.15 ರಷ್ಟು ಸೀಟುಗಳನ್ನು ನೀಡಲಾಗುತ್ತಿದೆ. ಇನ್ನೂ 15 ರಷ್ಟು ಸೀಟುಗಳು ಎನ್‌ಆರ್‌ಐ ಕೋಟಾಗೆ ನೀಡಿದರೆ 200 ವಿದ್ಯಾರ್ಥಿಗಳ ಒಂದು ಬ್ಯಾಚಿನಲ್ಲಿ 140 ಸೀಟುಗಳು ಮಾತ್ರ ರಾಜ್ಯದ ವಿದ್ಯಾರ್ಥಿಗಳಿಗೆ ಉಳಿದಂತಾಗುತ್ತದೆ ಎಂದರು.

ಸರ್ಕಾರಿ ವೈದ್ಯಕೀಯ ಕಾಲೇಜುಗಳು ಆರ್ಥಿಕ ಹಿನ್ನೆಲೆ ಲೆಕ್ಕಿಸದೆ ಅರ್ಹ ಮತ್ತು ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಗುಣಮಟ್ಟದ ಉನ್ನತ ಶಿಕ್ಷಣ ಒದಗಿಸಲು ಸ್ಥಾಪಿಸಲಾಗಿದೆ. ಶ್ರೀಮಂತ ಎನ್‌ಆರ್‌ಐ ವಿದ್ಯಾರ್ಥಿಗಳಿಗೆ ಸೀಟುಗಳನ್ನು ಮೀಸಲಿಡುವ ಮೂಲಕ, ವೈದ್ಯರಾಗಿ ಸಮಾಜಕ್ಕೆ ಸೇವೆ ಸಲ್ಲಿಸಲು ಬಯಸುವ ನೂರಾರು ಶ್ರಮಜೀವಿ, ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳ ಪ್ರತಿಭಾವಂತ ವಿದ್ಯಾರ್ಥಿಗಳ ಅವಕಾಶವನ್ನು ಕಡಿತಗೊಳಿಸಿದಂತಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕರ್ನಾಟಕದ ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ 12,447 ಬೋಧಕ ಹುದ್ದೆಗಳು ಖಾಲಿ ಇರುವ ಸಮಯದಲ್ಲಿ, ಸರ್ಕಾರವು ಈ ಹುದ್ದೆಗಳನ್ನು ಭರ್ತಿ ಮಾಡಲು ಮತ್ತು ಮೂಲಸೌಕರ್ಯವನ್ನು ಸುಧಾರಿಸಲು ಆದ್ಯತೆ ನೀಡಬೇಕು. ಬೋಧಕ ವರ್ಗ ಮತ್ತು ಸೌಲಭ್ಯಗಳನ್ನು ಬಲಪಡಿ ಸುವುದು ನಿಜವಾದ ಅಗತ್ಯವಾಗಿದೆ ಎಂದರು.

ಈ ಅಗತ್ಯಗಳನ್ನು ಪೂರೈಸಲು ಸರ್ಕಾರವು ಮುಂದಾಗಬೇಕು ಮತ್ತು ಶೇ.15ರಷ್ಟು ಎನ್‌ಆರ್‌ಐ ಕೋಟಾ ರದ್ದುಗೊಳಿಸುವ ಮೂಲಕ ಅರ್ಹ ಮತ್ತು ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಅವಕಾಶ ಕಲ್ಪಿಸಬೇಕೆಂದು ಆಗ್ರಹಿಸಿದರು.

ಈ ನಿರ್ಧಾರವು ಸರ್ಕಾರಿ ಕಾಲೇಜುಗಳನ್ನು ಖಾಸಗಿ ಸಂಸ್ಥೆಗಳಂತೆ ಲಾಭ ಗಳಿಸುವ ಕೇಂದ್ರಗಳಾಗಿ ಪರಿವರ್ತಿಸುವ ಅಪಾಯಕಾರಿ ಹೆಜ್ಜೆಯಾಗಿದೆ ಎಂದು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ಜಿಲ್ಲಾ ಕಾರ್ಯದರ್ಶಿ ಟಿ.ಎಸ್. ಸುಮನ್, ಸಂಘಟನಾ ಕಾರ್ಯದರ್ಶಿ ಗಂಗಾಧರ, ಮಂಜುನಾಥ, ಬಿ. ಹೆಚ್. ವೀರೇಶ್ ಸೇರಿದಂತೆ ನೂರಾರು ವಿದ್ಯಾರ್ಥಿಗಳು ಭಾಗವಹಿಸಿದ್ದರು. ಪ್ರತಿಭಟನೆ ನಂತರ ವೈದ್ಯಕೀಯ ಶಿಕ್ಷಣ ಸಚಿವರಿಗೆ ಉಪವಿಭಾಗಾಧಿಕಾರಿಗಳ ಮೂಲಕ ಮನವಿ ಸಲ್ಲಿಸಲಾಯಿತು.

# ಎಬಿವಿಪಿ ಕಾರ್ಯಕ್ರಮದಲ್ಲಿ ಭಾಗಿಯಾದ ವಿಚಾರ: ಗೃಹ ಸಚಿವ ಡಾ. ಜಿ. ಪರಮೇಶ್ವರ್ ಸ್ಪಷ್ಟನೆ



**ಬೆಂಗಳೂರು:** ನಾನು ಎಬಿವಿಪಿ ಕಾರ್ಯಕ್ರಮದಲ್ಲಿ ಭಾಗಿಯಾಗಿಲ್ಲ. ಐ ಯಾಮ್ ಎ ಟ್ರೂ ಕಾಂಗ್ರೆಸ್ ಮ್ಯಾನ್'' ಎಂದು ಗೃಹ ಸಚಿವ ಜಿ.ಪರಮೇಶ್ವರ್ ಗುರುವಾರ ಸ್ಪಷ್ಟಪಡಿಸಿದ್ದಾರೆ.

ಬಿಜೆಪಿ ಬೆಂಬಲಿತ ವಿದ್ಯಾರ್ಥಿ ಸಂಘಟನೆಯಾದ ಅಖಿಲ ಭಾರತ ವಿದ್ಯಾರ್ಥಿ ಪರಿಷತ್ (ABVP) ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಭಾಗವಹಿಸುವ ಮೂಲಕ ಪರಮೇಶ್ವರ್ ವಿವಾದಕ್ಕೆ ಕಾರಣವಾಗಿದ್ದಾರೆ. ಈ ಕುರಿತು ಸದಾಶಿವನಗರದ ತಮ್ಮ ನಿವಾಸದ ಬಳಿ ಪ್ರತಿಕ್ರಿಯಿಸಿದ ಪರಮೇಶ್ವರ್, ''ನಾನು ಎಬಿವಿಪಿ ಕಾರ್ಯಕ್ರಮದಲ್ಲಿ ಭಾಗಿಯಾಗಿಲ್ಲ. ನಾನು ದಾರಿಯಲ್ಲಿ ಬರುತ್ತಿದ್ದೆ. ಅಲ್ಲಿ ರಾಣಿ ಅಬ್ಬಕ್ಕ ಮೆರವಣಿಗೆ ಹೊರಟಿತ್ತು. ಅಬ್ಬಕ್ಕನಿಗೆ ಹೂ ಹಾಕಿದ್ದೇವಷ್ಟೇ. ಈ ವೇಳೆ ಶಾಸಕ ಷಡಕ್ಷರಿ ನಾನೂ ಒಟ್ಟಿಗೆ ಇದ್ದೆವು. ನಾನು ಯಾವ ಎಬಿವಿಪಿ ಕಾರ್ಯಕ್ರಮವನ್ನೂ ಅಟೆಂಡ್ ಮಾಡಿಲ್ಲ'' ಎಂದು ಸ್ಪಷ್ಟನೆ ನೀಡಿದರು.

ವಿವಾದ ಮಾಡುವುದಾದರೆ ಮಾಡಿಕೊಳ್ಳಲಿ. ನನಗೇನೂ ತೊಂದರೆ ಇಲ್ಲ. ನಾನು ನನ್ನ ಐಡಿಯಾಲಜಿಗೆ ಬದ್ಧತೆ ಇರುವವನು. ಅದನ್ನು ಯಾರೂ ಪ್ರಶ್ನೆ ಮಾಡುವ ಹಾಗಿಲ್ಲ. ಐ ಯಾಮ್ ಎ ಟ್ರೂ ಕಾಂಗ್ರೆಸ್ ಮ್ಯಾನ್. ಐ ಆಮ್ ಎ ಡೈ ಹಾರ್ಡ್ ಕಾಂಗ್ರೆಸ್? ಮ್ಯಾನ್. ನಮಗೂ ರಾಜಕೀಯ ವಿರೋಧಿಗಳು ಇರುತ್ತಾರೆ. ಅವರು ಏನು ಬೇಕಾದರೂ ಮಾಡುತ್ತಿರಬಹುದು. ಪಕ್ಷದ ಒಳಗೆ, ಹೊರಗೂ ಇರಬಹುದು. ಇಂತಹ ಚೀಪ್ ಟ್ರಿಕ್ಸ್ ಜನರಿಗೆ ಗೊತ್ತಾಗುತ್ತದೆ. ಪರಮೇಶ್ವರ್ ಏನು ಅಂತ ಇಡೀ ರಾಜ್ಯಕ್ಕೆ ಗೊತ್ತು. ಕಳೆದ 35 ವರ್ಷಗಳಿಂದ ರಾಜಕೀಯದಲ್ಲಿದ್ದೇನೆ. ರಾಜಕೀಯ ಏನು ಅಂತ ನನಗೂ ಗೊತ್ತಿದೆ. ನಾನು ಅದನ್ನು ಪದೇ ಪದೇ ಸಾಬೀತು ಮಾಡಬೇಕಿಲ್ಲ'' ಎಂದರು.

ಇದೇ ವಿಚಾರವಾಗಿ ಪ್ರತಿಕ್ರಿಯಿಸಿದ ಕೆಪಿಸಿಸಿ ಅಧ್ಯಕ್ಷರು ಆಗಿರುವ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್, ಈ ವಿವಾದದ ಬಗ್ಗೆ ನನಗೇನೂ ಗೊತ್ತಿಲ್ಲ. ಮಾಹಿತಿ ಪಡೆದು ಮಾತನಾಡುತ್ತೇನೆ ಎಂದು ಹೇಳಿದರು. ಇತ್ತೀಚಿಗೆ ಡಿಕೆ ಶಿವಕುಮಾರ್ ಕೂಡಾ ವಿಧಾನಸಭೆಯಲ್ಲಿ ಆರ್ ಎಸ್ ಎಸ್ ಪ್ರಾರ್ಥನಾ ಗೀತೆ ಹಾಡುವ ಮೂಲಕ ವಿವಾದಕ್ಕೆ ಗುರಿಯಾಗಿದ್ದರು. ಇದಕ್ಕೆ ಪಕ್ಷದೊಳಗೆ ತೀವ್ರ ಟೀಕೆಗಳು ಕೇಳಿಬಂದ ನಂತರ ಕ್ಷಮೆಯಾಚಿಸಿದ್ದರು.

# ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್‌ರನ್ನು ಬಣ್ಣಿಸಿದ ಪ್ರಧಾನಿ ಮೋದಿ



**ನವದೆಹಲಿ :** ಮೋಹನ್ ಭಾಗವತ್ ಅವರ ಬೌದ್ಧಿಕ ಆಳ ಮತ್ತು ಸಹಾನುಭೂತಿಯ ನಾಯಕತ್ವಕ್ಕಾಗಿ ಶ್ಲಾಘಿಸಿರುವ ಪ್ರಧಾನಿ ನರೇಂದ್ರ ಮೋದಿ, 2009 ರಿಂದ ಆರ್‌ಎಸ್‌ಎಸ್ ಮುಖ್ಯಸ್ಥರಾಗಿ ಅವರ ಅಧಿ ಕಾರಾವಧಿಯನ್ನು ಅದರ 100 ವರ್ಷಗಳ ಪ್ರಯಾಣದಲ್ಲಿ ಅತ್ಯಂತ ಪರಿವರ್ತನಾ ಅವಧಿ ಎಂದು ಪರಿಗಣಿಸಲಾಗುವುದು ಎಂದು ಹೇಳಿದ್ದಾರೆ.

ಭಾಗವತ್ ಅವರ 75 ನೇ ಹುಟ್ಟುಹಬ್ಬದಂದು ಹಲವಾರು ಪತ್ರಿಕೆಗಳಲ್ಲಿ ಪ್ರಕಟವಾದ ಒಂದು ಉಜ್ವಲ ಲೇಖನದಲ್ಲಿ, ಅವರು ವಸುಧೈವ ಕುಟುಂಬಕಂನ ಜೀವಂತ ಉದಾಹರಣೆಯಾಗಿದ್ದು, ಸಾಮಾಜಿಕ ಪರಿವರ್ತನೆ ಮತ್ತು ಸಾಮರಸ್ಯ ಮತ್ತು ಭ್ರಾತೃತ್ವದ ಮನೋಭಾವವನ್ನು ಬಲಪಡಿಸಲು ತಮ್ಮ ಇಡೀ ಜೀವನವನ್ನು ಮುಡಿಪಾಗಿಟ್ಟಿದ್ದಾರೆ ಎಂದು ಮೋದಿ ಹೇಳಿದ್ದಾರೆ.

ಈ ವರ್ಷ ರಾಷ್ಟ್ರೀಯ ಸ್ವಯಂಸೇವಕ ಸಂಘದ 100 ವರ್ಷಗಳ ಪ್ರಯಾಣವು ಮಹಾತ್ಮ ಗಾಂಧಿ ಮತ್ತು ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜನ್ಮ ದಿನಾಚರಣೆಯ ದಿನದಂದು ಬರುವುದು ಆಹ್ಲಾದಕರ ಕಾಕತಾಳೀಯ ಎಂದು ಹೇಳಿದ ಅವರು, ಹಿಂದುತ್ವ ಸಂಘಟನೆಯು ಭಾಗವತ್‌ನಲ್ಲಿ ಬಹಳ ಬುದ್ಧಿವಂತ ಮತ್ತು ಶ್ರಮಶೀಲ ನಾಯಕನನ್ನು ಹೊಂದಿದೆ ಎಂದು ಹೇಳಿದರು.

ಜನರು ಗಡಿಗಳನ್ನು ಮೀರಿ ಎಲ್ಲರನ್ನೂ ತಮ್ಮದೇ ಎಂದು ಪರಿಗಣಿಸಿದಾಗ, ಅದು ಸಮಾಜದಲ್ಲಿ ನಂಬಿಕೆ, ಸಹೋದರತ್ವ ಮತ್ತು ಸಮಾನತೆಯನ್ನು ಬಲಪಡಿಸುತ್ತದೆ ಎಂದು ಅವರು ತೋರಿಸಿದ್ದಾರೆ ಎಂದು ಪ್ರಧಾನಿ ಹೇಳಿದರು. ಅವರ ಮೃದು ಸ್ವಭಾವವನ್ನು ಶ್ಲಾಘಿಸಿದ ಅವರು, ಭಾಗವತ್ ಅವರು ಅಸಾಧಾರಣ ಆಲಿಸುವ ಸಾಮರ್ಥ್ಯವನ್ನು ಹೊಂದಿದ್ದಾರೆ, ಇದು ಅವರಿಗೆ ಆಳವಾದ ದೃಷ್ಟಿಕೋನವನ್ನು ನೀಡುತ್ತದೆ ಮತ್ತು ಅವರ ವ್ಯಕ್ತಿತ್ವ ಮತ್ತು ನಾಯಕತ್ವಕ್ಕೆ ಸೂಕ್ಷ್ಮತೆ ಮತ್ತು ಘನತೆಯ ಪ್ರಜ್ಞೆಯನ್ನು ತರುತ್ತದೆ ಎಂದು ಹೇಳಿದರು.

ಸರಸಂಘಚಾಲಕ್ ಆಗಿರುವುದು ಸಾಂಸ್ಥಿಕ ಜವಾಬ್ದಾರಿಗಿಂತ ಹೆಚ್ಚಿನದಾಗಿದೆ, ಅವರು ಹೇಳಿದರು, ಅಸಾಧಾರಣ ವ್ಯಕ್ತಿಗಳು ವೈಯಕ್ತಿಕ ತ್ಯಾಗ, ಉದ್ದೇಶದ ಸ್ಪಷ್ಟತೆ ಮತ್ತು ದೇಶಕ್ಕೆ ಅಚಲ ಬದ್ಧತೆಯ ಮೂಲಕ ಈ ಪಾತ್ರವನ್ನು ವ್ಯಾಖ್ಯಾನಿಸಿದ್ದಾರೆ. ಮೋಹನ್ ಜಿ, ಜವಾಬ್ದಾರಿಯ ಅಗಾಧತೆಗೆ ಸಂಪೂರ್ಣ ನ್ಯಾಯ ಒದಗಿಸುವುದರ ಜೊತೆಗೆ, ಅದ–ಕ್ಕೆ ತಮ್ಮದೇ ಆದ ಶಕ್ತಿ, ಬೌದ್ಧಿಕ ಆಳ ಮತ್ತು ಸಹಾನುಭೂತಿಯ ನಾಯಕತ್ವವನ್ನು ತಂದಿದ್ದಾರೆ, ಇವೆಲ್ಲವೂ ರಾಷ್ಟ್ರ ಮೊದಲು ಎಂಬ ತತ್ವದಿಂದ ಪ್ರೇರಿತವಾಗಿವೆ ಎಂದು ಅವರು ಹೇಳಿದರು. ಮೋಹನ್ ಜಿ ಅವರು ತಮ್ಮ ಹೃದಯಕ್ಕೆ ಹತ್ತಿರವಾಗಿದ್ದ ಮತ್ತು ಅವರ ಕಾರ್ಯ ಶೈಲಿಯಲ್ಲಿ ಅಳವಡಿಸಿಕೊಂಡಿದ್ದ ಎರಡು ಗುಣಲಕ್ಷಣಗಳ ಬಗ್ಗೆ ನಾನು ಯೋಚಿಸಿದರೆ, ಅವು ನಿರಂತರತೆ ಮತ್ತು ಹೊಂದಾಣಿಕೆ ಎಂದು ಅವರು ಹೇಳಿದರು. ಭಾಗವತ್ ಅವರು ಸಂಕೀರ್ಣ ಪ್ರವಾಹಗಳ ಮೂಲಕ ಸಂಸ್ಥೆಯನ್ನು ಮುನ್ನಡೆಸಿದ್ದಾರೆ.

ಅದರ ಮೂಲ ಸಿದ್ಧಾಂತದಲ್ಲಿ ಎಂದಿಗೂ ರಾಜಿ ಮಾಡಿಕೊಳ್ಳುವುದಿಲ್ಲ ಎಂದು ಪ್ರಧಾನಿ ಹೇಳಿದರು, ಪ್ರತಿಯೊಬ್ಬರೂ ಹೆಮ್ಮೆಪಡುತ್ತಾರೆ ಮತ್ತು ಅದೇ ಸಮಯದಲ್ಲಿ, ಸಮಾಜದ ವಿಕಸನಗೊಳ್ಳುತ್ತಿರುವ ಅಗತ್ಯಗಳನ್ನು ಪರಿಹರಿಸುತ್ತಾರೆ. ಅವರು ಯುವಕರೊಂದಿಗೆ ಸ್ವಾಭಾವಿಕ ಸಂಪರ್ಕವನ್ನು ಹೊಂದಿದ್ದಾರೆ ಮತ್ತು ಆದ್ದರಿಂದ ಯಾವಾಗಲೂ ಹೆಚ್ಚಿನ ಯುವಕರನ್ನು ಸಂಘ ಪರಿವಾರಕ್ಕೆ ಸಂಯೋಜಿಸುವತ್ತ ಗಮನಹರಿಸಿದ್ದಾರೆ.

ಅವರು ಸಾರ್ವಜನಿಕ ಭಾಷಣದಲ್ಲಿ ತೊಡಗಿಸಿಕೊಳ್ಳುವುದು ಮತ್ತು ಜನರೊಂದಿಗೆ ಸಂವಹನ ನಡೆಸುವುದನ್ನು ಹೆಚ್ಚಾಗಿ ಕಾಣಬಹುದು, ಇದು ಇಂದಿನ ಕ್ರಿಯಾತ್ಮಕ ಮತ್ತು ಡಿಜಿಟಲ್ ಜಗತ್ತಿನಲ್ಲಿ ಬಹಳ ಪ್ರಯೋಜನಕಾರಿಯಾಗಿದೆ ಎಂದು ಮೋದಿ ಹೇಳಿದರು. ಸ್ವಚ್ಛ ಭಾರತ್ ಮಿಷನ್ ಮತ್ತು ಬೇಟಿ ಬಚಾವೋ ಬೇಟಿ ಪಡಾವೋದಂತಹ ತಮ್ಮ ಸರ್ಕಾರದ ವಿವಿಧ ಕಾರ್ಯಕ್ರಮಗಳಲ್ಲಿ ಅವರ ತೀವ್ರ ಆಸಕ್ತಿಯನ್ನು ಅವರು ಶ್ಲಾಘಿಸಿದರು.

# ಗ್ರಾಮ ಪಂಚಾಯತಿ ಮಟ್ಟದಲ್ಲಿ ಬೆಳೆ ನಷ್ಟ ಸಮೀಕ್ಷೆ ನಡೆಸಿ, ಮಧ್ಯಂತರ ಪರಿಹಾರ ಬಿಡುಗಡೆ ಮಾಡಿ: ಬೊಮ್ಮಾಯಿ



**ಹಾವೇರಿ:** ರಾಜ್ಯ ಸರ್ಕಾರವು ಭಾರೀ ಮಳೆಯಿಂದ ಹಾನಿಗೊಳಗಾದ ಪ್ರದೇಶಗಳಲ್ಲಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಬೆಳೆ ನಷ್ಟ ಸಮೀಕ್ಷೆಗಳನ್ನು ನಡೆಸಿ ರೈತರಿಗೆ ಮಧ್ಯಂತರ ಪರಿಹಾರವನ್ನು ನೀಡಬೇಕು ಎಂದು ಸಂಸದ ಮತ್ತು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಒತ್ತಾಯಿಸಿದ್ದಾರೆ.

ಗುರುವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಬೊಮ್ಮಾಯಿ, ಬೆಳೆ ನಷ್ಟದ ಕುರಿತು ವಿವರವಾದ ವರದಿಯನ್ನು ಕೇಂದ್ರ ಸರ್ಕಾರಕ್ಕೆ ಕಳುಹಿಸಬಹುದು. ಓಆಖಈ ಮತ್ತು ಖಆಖಈ ಮಾನದಂಡಗಳ ಅಡಿಯಲ್ಲಿ ಪರಿಹಾರವನ್ನು ನೀಡಬೇಕು ಎಂದು ಹೇಳಿದರು.

ಕಳೆದ ಎರಡು ವರ್ಷ ವಾಡಿಗೆಗಿಂತ ಹೆಚ್ಚು ಮಳೆ ಆಗಿದೆ. ರೈತರ ಬೆಳೆ ನಷ್ಟವಾಗಿದೆ, ಬಡವರ ಮನೆ ಬಿದ್ದಿವೆ. ಇಷ್ಟೆಲ್ಲಾ ಆದರೂ ಸರ್ಕಾರ ಕಣ್ಣು ಮುಚ್ಚಿಕೊಂಡು ಕೂತಿದೆ ಎಂದರು. ಮೊನ್ನೆ ಕಾಟಾಚಾರಕ್ಕೆ ಒಂದು ಸಭೆ ಬಿಟ್ಟರೆ ಸಿಎಂ ಸಿದ್ದರಾಮಯ್ಯ ಏನೂ ಮಾಡಿಲ್ಲ. ಬೆಳೆ ನಷ್ಟದ ವ್ಯಾಪ್ತಿ, ಕ್ಷೇತ್ರದ ಬಗ್ಗೆ ಪ್ರಾಥಮಿಕ ಸಮೀಕ್ಷೆ ಸರಿಯಾಗಿ ಮಾಡೇ ಇಲ್ಲ. ಗ್ರಾ.ಪಂ ಮಟ್ಟದಲ್ಲಿ ವಿಲೇಜ್ ಅಕೌಂಟೆಂಟ್ ಸರ್ವೆ ಮಾಡಬೇಕು. ಅರ್ಜಿ ಕೊಟ್ಟಲ್ಲಿ ಮಾತ್ರ ಸರ್ವೆ ಮಾಡಿದ್ದಾರೆ, ವೈಜ್ಞಾನಿಕವಾಗಿ ಬೆಳೆಹಾನಿ ಸರ್ವೆ ಆಗೇ ಇಲ್ಲ ಎಂದರು.

ಹಾವೇರಿ ಜಿಲ್ಲೆಯಲ್ಲಿ 23,536 ಹೆಕ್ಟೇರ್ ಪ್ರದೇಶ ಹಾವೇರಿ ಜಿಲ್ಲೆಯಲ್ಲಿ ನಷ್ಟವಾಗಿದೆ. ಇದಕ್ಕಿಂತ ವ್ಯಾಪಕವಾಗಿ ನಷ್ಟವಾಗಿದೆ. ಕೃಷಿ ಇಲಾಖೆ ರೈತರ ಸಮಸ್ಯೆಗಳಿಗೆ ಸ್ಪಂದಿಸ್ತಿಲ್ಲ. ಮನೆ ಬಿದ್ದ ಬಗ್ಗೆ ಸರ್ಕಾರ ಚಕಾರ ಎತ್ತುತ್ತಿಲ್ಲ. ನಮ್ ಸರ್ಕಾರ ಮನೆ ಬಿದ್ದರೆ 5 ಲಕ್ಷ ಕೊಡ್ತಾ ಇತ್ತು.

ಎನ್‌ಡಿಆರ್‌ಎಫ್ ನಿಯಮದ ಪ್ರಕಾರವೂ ಪರಿಹಾರ ಕೊಟ್ಟಿಲ್ಲ. ಮನೆಗೆ ನೀರು ಹೊಕ್ಕಾಗ 10000 ಕೊಡಬೇಕು, ಇವರು ಕೊಟ್ಟೇ ಇಲ್ಲ. ಕೃಷಿ ಬಗ್ಗೆ ಅತ್ಯಂತ ನಿರ್ಲಕ್ಷ್ಯ ನಿಷ್ಕಾಳಜಿ ವಹಿಸಿದ್ದಾರೆ.

# ವಾಸ್ತವ ಬದುಕಿನ ಶಿಕ್ಷಣ ಇಂದಿಗೆ ಅಗತ್ಯ : ಡಿಐಜಿಪಿ ರವಿ ಡಿ.ಚನ್ನಣ್ಣನವರ್



**ಬೀರೂರು:** ಮಕ್ಕಳ ಜ್ಞಾನಾರ್ಜನೆಗೆ ಪಠ್ಯದ ಶಿಕ್ಷಣದ ಜೊತೆಗೆ ವಾಸ್ತವ ಬದುಕಿನ ಶಿಕ್ಷಣವನ್ನು ಹೇಳಿಕೊಡುವುದು ಇಂದಿನ ಅನಿವಾರ್ಯತೆ ಇದೆ ಎಂದು ಕರ್ನಾಟಕ ಅಗ್ನಿಶಾಮಕ ದಳ ಡಿಐಜಿಪಿ ರವಿ ಡಿ.ಚನ್ನಣ್ಣನವರ್ ಅಭಿಪ್ರಾಯಪಟ್ಟರು.

ಪಟ್ಟಣದ ಗುರುಭವನದಲ್ಲಿ ನಡೆದ ಡಾ. ಸರ್ವಪಲ್ಲಿ ರಾಧಾಕೃಷ್ಣನ್‌ರವರ ಜನ್ಮದಿನೋತ್ಸವದ ಅಂಗವಾಗಿ ಬೀರೂರು ಶೈಕ್ಷಣಿಕ ತಾಲ್ಲೂಕು ಮಟ್ಟದ 64ನೇ ಶಿಕ್ಷಕರ ದಿನಾಚರಣೆ ಮತ್ತು ನಿವೃತ್ತ ಶಿಕ್ಷಕರಿಗೆ ಸನ್ಮಾನ ಸಮಾರಂಭದಲ್ಲಿ ಪ್ರಧಾನ ಉಪನ್ಯಾಸ ನೀಡಿ ಮಾತನಾಡಿದರು.

ಪ್ರಸ್ತುತ ಸರಕಾರ ಮಕ್ಕಳ ಶಿಕ್ಷಣಕ್ಕೆ ಎಲ್ಲಾ ರೀತಿಯಲ್ಲೂ ಒತ್ತು ಕೊಡುತ್ತಿದೆ. ಅದಕ್ಕೆ ಪೂರಕವಾಗಿ ಶಿಕ್ಷಣವನ್ನು ನೀಡಬೇಕಿದೆ. ಈ ಹಿಂದೆ ಗುರುಪರಂಪರೆ ವಿಧಾನದಲ್ಲಿ ಕಲಿಕೆಯ ಶಿಕ್ಷಣ ಸಂಸ್ಕೃತಿಯನ್ನು ಬಿಂಬಿಸುತ್ತಿದ್ದು, ಬಳಿಕ ಹಂತ ಹಂತದ ಶಿಕ್ಷಣದ ಪರಿಪಾಠ ಬದಲಾದಂತೆ ಮಕ್ಕಳ ಕಲಿಕೆಯ ಮಟ್ಟ ವೃದ್ಧಿಗೊಳ್ಳುತ್ತಿದೆ. ಈ ನಿಟ್ಟಿನಲ್ಲಿ ಬಾಲ್ಯದಲ್ಲಿಯೇ ನಕಾರಾತ್ಮಕ ಚಿಂತನೆಗಳಿಂದ ದೂರವಿರಿಸಲು ಬದುಕಿನ ಶಿಕ್ಷಣ ಭವಿಷ್ಯದ ದಿನಗಳಲ್ಲಿ ವಿದ್ಯಾರ್ಥಿಗಳು ತಮ್ಮ ವ್ಯಕ್ತಿತ್ವವನ್ನು ರೂಪಿಸಿಕೊಳ್ಳಬಹುದಾದ ಯೋಜನೆಗಳನ್ನು ಹಾಕಿಕೊಟ್ಟು ಮಕ್ಕಳ ಕಲಿಕೆಗೆ ಪ್ರೋತ್ಸಾಹಿಸುವ ಹೊಣೆಗಾರಿಕೆ ಪ್ರತಿಯೊಬ್ಬ ಶಿಕ್ಷಕರ ಮೇಲಿದೆ. ಜೀವನದಲ್ಲಿ ಶಿಸ್ತು ಸಂಯಮವನ್ನು ಕಾಪಾಡಿಕೊಂಡರೆ ಉತ್ತಮ ವ್ಯಕ್ತಿತ್ವ ಹೊರಹೊಮ್ಮುತ್ತದೆ. ಇದರ ಹಿಂದಿನ ಪರಿಶ್ರಮ ಕಲಿಕೆಯ ಶಿಕ್ಷಣಕ್ಕೆ ಶಿಕ್ಷಕ ಪ್ರಮುಖ ಪಾತ್ರವಹಿಸುತ್ತಾನೆ ಎಂಬುದನ್ನು ನಾವೆಲ್ಲರೂ ಮನಗಾಣಬೇಕು ಎಂದರು.

ಮಾನವೀಯ ಶಿಕ್ಷಣವು ಮಾನವೀಯ ಮತ್ತು ನೈತಿಕವಾಗಿ ಜವಾಬ್ದಾರಿಯುತ ಸಮಾಜದ ನಿರ್ಮಾಣ ಘಟಕವಾಗಿದೆ. ಶಿಕ್ಷಕರು ಯಶಸ್ವಿಯಾಗಿ ಪ್ರಯತ್ನಿಸಿದ ಮತ್ತು ಪರೀಕ್ಷಿಸಿದ ವಿಧಾನಗಳನ್ನು ಬಳಸಿಕೊಂಡು ಮಕ್ಕಳಿಗೆ ಪ್ರಾಥಮಿಕ ಹಂತದಲ್ಲೇ ತಿಳಿಹೇಳುವ ಪ್ರಯತ್ನಗಳು ನಡೆದಾಗ ಭವಿಷ್ಯದಲ್ಲಿ ಆರೋಗ್ಯಕರ ಸಮಾಜ ನಿರ್ಮಾಣ ಮಾಡಲು ಸಾಧ್ಯವಾಗುತ್ತದೆ ಎಂದರು.

ಈ ಪ್ರಕ್ರಿಯೆಯನ್ನು ನಿರ್ವಹಿಸಿದಾಗ ಮಾನವೀಯ ಶಿಕ್ಷಣವು ಮಾನವೀಯ ಮತ್ತು ನೈತಿಕವಾಗಿ ಜವಾಬ್ದಾರಿಯುತ ಸಮಾಜದ ನಿರ್ಮಾಣ ಘಟಕವಾಗಿದೆ. ಶಿಕ್ಷಕರು ಯಶಸ್ವಿಯಾಗಿ ಪ್ರಯತ್ನಿಸಿದ ಮತ್ತು ಪರೀಕ್ಷಿಸಿದ ವಿಧಾನಗಳನ್ನು ಬಳಸಿಕೊಂಡು ಈ ಪ್ರಕ್ರಿಯೆಯನ್ನು ನಿರ್ವಹಿಸಿ, ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿ ಹೋರಾಡಿ ಪಡೆಯುವುದೇ ಹೆಚ್ಚು. ಜ್ಞಾನ ಕಡಿಮೆಯಾದರೂ ಪರವಾಗಿಲ್ಲ ಆದರೆ, ಮಾನವೀಯತೆ ಹೆಚ್ಚಿರುವಂತಹ ವ್ಯಕ್ತಿಯನ್ನು ಶಿಕ್ಷಕರು ಹುಟ್ಟುಹಾಕಬೇಕು. ನಿಮ್ಮ ಸೇವಾ ಅವಧಿಯಲ್ಲಿ ಸಮಾಜದಲ್ಲಿ ಆಗುವ–ಹೋಗುವ ಅನ್ಯಾಯಗಳನ್ನು ಪ್ರಶ್ನೆ ಮಾಡುವಂತಹ ಗುಣಗಳನ್ನು ಬೆಳಸಿ, ಅಂತಹ ರೆಬೆಲ್ ನಾಯಕರನ್ನು ನೀಡಿದಾಗ ಮಾತ್ರ ನಿಮ್ಮ ಶ್ರಮ ಸಾರ್ಥಕವಾಗಿ ಅನೇಕ ಸಮಸ್ಯೆಗಳಿಗೆ ಅವರೇ ಪರಿಹಾರ ದೊರಕಿಸಿಕೊಳ್ಳುತ್ತಾರೆ. ಯಾರಿಗೆ ಯಾರು ಇಲ್ಲವೋ ಅಂತವರ ಪರವಾಗಿ ಧ್ವನಿಯಾಗಿ ನಿಲ್ಲಬೇಕು ಎಂದರು.

ಶಿಕ್ಷಕರಿಗೆ ಆಲೋಚನ ಲಹರಿ ಸರಿಯಾಗಿದ್ದರೆ ಈ ದೇಶದ ಅತೀ ಹೆಚ್ಚು ಮಾನವ ಸಂಪನ್ಮೂಲ ಹೊಂದಿರುವ ಯುವಕರನ್ನು ದೇಶ ಕಟ್ಟುವ ಕಾಯಕ ಮಾಡುವಂತೆ ಮಾಡಿದರೆ, ಈ ದೇಶ ಉದ್ಧಾರವಾಗುವುದರಲ್ಲಿ ಸಂಶಯವಿಲ್ಲ. ಸರಿ–ತಪ್ಪುಗಳ ಬಗ್ಗೆ ಪ್ರಾಥಮಿಕ ಹಂತದಲ್ಲೇ ತಿಳಿಸಿಕೊಟ್ಟರೆ ಅಪರಾಧ ಪ್ರಕರಣಗಳು ಸಹ ಕಡಿಮೆಯಾಗುತ್ತವೆ.

ಶಿಕ್ಷಕರು ಭವಿಷ್ಯ ಭಾರತ ನಿರ್ಮಾಣ ಮಾಡುವ ಕಾರ್ಖಾನೆಗಳಾಗಬೇಕು. ಸರ್ವರಿಗೂ ಸಮಪಾಲು ಮತ್ತು ಸರ್ವರಿಗೂ ಸಮಬಾಳು ಎನ್ನುವ ಆಲೋಚನೆ ಹೊಂದಿದ ವ್ಯಕ್ತಿಗಳ ಅನಿವಾರ್ಯಕ್ಕೆ ಇದ್ದು, ಅಂತಹ ವ್ಯಕ್ತಿಗಳನ್ನು ಉತ್ತಮ ಸಮಾಜಕ್ಕೆ ನೀಡಿ ಎಂದರು.

ಕಾರ್ಯಕ್ರಮವನ್ನು ಅಧ್ಯಕ್ಷತೆ ವಹಿಸಿದ್ದ ಕ್ಷೇತ್ರ ಶಾಸಕ ಕೆ.ಎಸ್. ಆನಂದ್ ಮಾತನಾಡಿ, ಭಾರತೀಯ ಸಾಂಸ್ಕೃತಿಕ ಪರಂಪರೆಯಲ್ಲಿ ಶಿಕ್ಷಕ ವೃತ್ತಿ ಅತ್ಯಂತ ಪವಿತ್ರವಾದುದು. ಕಲಿತು, ಸಾಧಿಸಿದ ವಿದ್ಯೆಯನ್ನು ಮತ್ತೊಬ್ಬರಿಗೆ ಧಾರೆಯೆರೆಯುವ ಪುಣ್ಯ ಕೆಲಸ. ವೇದ ಪುರಾಣದ ಕಾಲದಿಂದಲೂ ಭಾರತದಲ್ಲಿ ಗುರುವಿಗೆ ಪರಮೋನ್ನತ ಸ್ಥಾನವನ್ನು ಕೊಡಲಾಗಿದೆ.

ಪುರಸಭೆ ಅಧ್ಯಕ್ಷೆ ಭಾಗ್ಯಲಕ್ಷ್ಮಿ ಮೋಹನ್, ಬಿಇಒ ಚೋಪ್ದಾರ್, ಕ್ಷೇತ್ರ ಸಂಪನ್ಮೂಲ ವ್ಯಕ್ತಿ ಎನ್.ಶೇಖರಪ್ಪ ಮಾತನಾಡಿದರು.

ವೇದಿಕೆಯಲ್ಲಿ ಬೀರೂರು ಶೈಕ್ಷಣಿಕ ವಲಯದ ಅಧ್ಯಕ್ಷ ಬಸಪ್ಪ, ಪ್ರಧಾನ ಕಾರ್ಯದರ್ಶಿ ಆರ್.ಟಿ.ಅಶೋಕ್, ಜಿಲ್ಲಾ ಉಪಾಧ್ಯಕ್ಷ ಬಿ.ಜೆ.ಜಗದೀಶ್, ಪುರಸಭಾ ಮಾಜಿ ಅಧ್ಯಕ್ಷೆ ವನಿತಮಧು, ಸದಸ್ಯರಾದ ಮಾನಿಕ್ ಭಾಷ, ಶಿಕ್ಷಕರ ಸಂಘದ ನಾಗರಾಜ್, ಹಿದಾಯತ್ ಉಲ್ಲಾ, ಮಾದಯ್ಯ, ಯಮುನಾ ಮೋಹನ್, ವಿ.ಗೀತಾ, ಎನ್.ಮಹೇಶ್, ಮೈಲಾರಪ್ಪ, ಮೋಹನ್‌ರಾಜ್, ಕವಿತಾ ಹೆಚ್ಚ, ಬಿ.ಆರ್.ಗಂಗಪ್ಪ, ಸೇರಿದಂತೆ ಶಿಕ್ಷಕರ ಸಂಘದ ವಿವಿಧ ಪದಾಧಿಕಾರಿಗಳು ಭಾಗವಹಿಸಿದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**